ಸಂಪುಟ: 06 ಸಂಚಿಕೆ: 114 ಪುಟಗಳು: 08 ಮಂಗಳವಾರ 07 ಜುಲೈ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ವಯಸ್ಸು ನಮ್ಮ ಚರ್ಮ ಸುಕ್ಕಾಗುವಂತೆ ಮಾಡುತ್ತದೆ. ಆದರೆ, ಉತ್ಸಾಹದ ಕೊರತೆಯು ನಮ್ಮ ಆತ್ಮವನ್ನೇ ಸುಕ್ಕುಗಟ್ಟಿಸುತ್ತದೆ.
- ಸಾಕ್ರಟೀಸ್

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಇಸ್ರೋ ಕೇಂದ್ರ ಕಚೇರಿಗೆ ಬಾಂಬ್ ಬೆದರಿಕೆ

• ಉದಯವಾಹಿನಿ, ಬೆಂಗಳೂರು

ಇಸ್ರೋ ಕೇಂದ್ರ ಕಚೇರಿಗೆ ಬಾಂಬ್ ಬೆದರಿಕೆ ಇ-ಮೇಲ್ ಬಂದಿದ್ದು, ಕೆಲ ಕಾಲ ಆತಂಕದ ವಾತಾವರಣ ಉಂಟಾಗಿತ್ತು.ಸಂಜಯನಗರ ಪೊಲೀಸ್ ಠಾಣೆ ವ್ಯಾಪ್ತಿಯ ಬಿಇಎಲ್ ರಸ್ತೆಯಲ್ಲಿರುವ ಇಸ್ರೋ ಕೇಂದ್ರ ಕಚೇರಿಗೆ ಬಾಂಬ್ ಇಡಲಾಗಿದೆ ಎಂಬ ಇ-ಮೇಲ್ ಅನ್ನು ರಾತ್ರಿ ದುಷ್ಕರ್ಮಿಗಳು ಕಳುಹಿಸಿದ್ದಾರೆ. ಕಚೇರಿಗೆ ಬಂದ ಸಿಬ್ಬಂದಿ ಇ-ಮೇಲ್ ಪರಿಶೀಲಿಸುತ್ತಿದ್ದಾಗ ತಮಿಳು ಭಾಷೆಯಲ್ಲಿ ಬಾಂಬ್ ಬೆದರಿಕೆಯ ಇ-ಮೇಲ್ ಸಂದೇಶ ಗಮನಿಸಿ ಆತಂಕಗೊಂಡು ತಕ್ಷಣ ಪೊಲೀಸರಿಗೆ ವಿಷಯ ತಿಳಿಸಿದ್ದಾರೆ. ಸುದ್ದಿ ತಿಳಿದು ಸಂಜಯನಗರ ಠಾಣೆ ಪೊಲೀಸರು ಬಾಂಬ್ ಪತ್ತೆದಳ, ಬಾಂಬ್ ನಿಷ್ಕ್ರಿಯದಳ ಹಾಗೂ ಶ್ವಾನ ದಳದೊಂದಿಗೆ ಸ್ಥಳಕ್ಕೆ ದಾವಿಸಿ ಪರಿಶೀಲನೆ ನಡೆಸಿದಾಗ ಯಾವುದೇ ಬಾಂಬ್ ನಂತಹ ವಸ್ತುಗಳು ಪತ್ತೆಯಾಗಿಲ್ಲ. ಇಸ್ರೋ ಸಿಬ್ಬಂದಿ ನಿಟ್ಟುಸಿರುಬಿಟ್ಟಿದ್ದಾರೆ. ಕಳೆದ ಒಂದು ವಾರದ ಹಿಂದೆಯೂ ಕೂಡ ಈ ಕೇಂದ್ರಕ್ಕೆ ಇದೇ ರೀತಿ ಬಾಂಬ್ ಬೆದರಿಕೆಯ ಇ-ಮೇಲ್ ಬಂದಿತ್ತು. ಆ ಸಂದರ್ಭದಲ್ಲಿ ಸಹ ಪೊಲೀಸರು, ಬಾಂಬ್ ಪತ್ತೆದಳ, ಬಾಂಬ್ ನಿಷ್ಕ್ರಿಯದಳ ಪರಿಶೀಲಿಸಿದಾಗ ಯಾವುದೇ ಸ್ಫೋಟಕದಂತಹ ವಸ್ತುಗಳು ಕಂಡು ಬಂದಿರಲಿಲ್ಲ.

## ಜನ, ಜಾನುವಾರುಗಳಿಗೆ ಕುಡಿಯುವ ನೀರು, ಮೇವಿನ ಸಮಸ್ಯೆಯಾಗದಂತೆ ಕ್ರಮ: ಡಿಸಿಎಂ ಪರಮೇಶ್ವರ್

• ಉದಯವಾಹಿನಿ, ಬೆಂಗಳೂರು



ನಾವು ಬರಗಾಲ ಎದುರಿಸಬೇಕಾದ ಸಂದರ್ಭ ಬಂದಿದೆ. ಈಗಾಗಲೇ ನಾನು ಮತ್ತು ಮುಖ್ಯಮಂತ್ರಿಗಳು ಜನ, ಜಾನುವಾರುಗಳಿಗೆ ಕುಡಿಯುವ ನೀರು, ಮೇವಿನ ಸಮಸ್ಯೆ ಸೇರಿದಂತೆ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಕೈಗೊಳ್ಳಬೇಕಿರುವ ಕ್ರಮಗಳ ಕುರಿತು ಅಧಿಕಾರಿಗಳಿಗೆ ಅಗತ್ಯ ಸೂಚನೆಗಳು ಮತ್ತು ನಿರ್ದೇಶನಗಳನ್ನು ನೀಡಿದ್ದೇವೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದರು.

ವಿಧಾನಸೌಧದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಈಗಾಗಲೇ ಬೆಳಗಾವಿ, ಚಿತ್ರದುರ್ಗ, ತುಮಕೂರು ಜಿಲ್ಲೆಗಳಲ್ಲಿ ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸಿ, ಚರ್ಚಿಸಿದ್ದೇನೆ. ಜಲಾಶಯಗಳು ಡೆಡ್ ಸ್ಟೋರೇಜ್ ಗೆ ತಲುಪಿರುವುದರಿಂದ ನೀರನ್ನು ಎಚ್ಚರಿಕೆಯಿಂದ ಬಳಸಬೇಕು. ಲಭ್ಯ ಇರುವ ನೀರನ್ನು ಕುಡಿಯಲು ಹೊರತುಪಡಿಸಿ, ಬೇರೆ ಯಾವುದೇ ರೀತಿಯ ಉದ್ದೇಶಕ್ಕೆ ಬಳಕೆಯಾಗದಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿರುವುದಾಗಿ ತಿಳಿಸಿದರು. ಕಡೆಗಳಲ್ಲಿ ಮಳೆಯಾಗಿದೆ. ಹೀಗೆಯೇ ಇನ್ನೊಂದೆರಡು ದಿನ ಮಳೆಯಾದ್ರೆ ಜಲಾಶಯಗಳು ಸ್ವಲ್ಪ ಮಟ್ಟಿಗಾದರೂ ತುಂಬಬಹುದು. ಮಲೆನಾಡಿನಲ್ಲಿ ಮಳೆಯಾಗುತ್ತಿರುವುದರಿಂದ ಕೆಆರ್ಎಸ್‌ಗೆ ಒಳ ಹರಿವು ಆರಂಭವಾಗಿದೆ. ಜಲಾಶಯಗಳಲ್ಲಿ ಒಂದು ಮಟ್ಟಿಗಾದರೂ ನೀರು ತುಂಬಿದರೆ ಜನರಿಗೆ ಕುಡಿಯುವ ನೀರಿಗೆ ಸಮಸ್ಯೆಯಾಗುವುದಿಲ್ಲ ಎಂದು ಹೇಳಿದರು. ಜಾನುವಾರುಗಳಿಗೆ ಮೇವಿನ ಕಿಟ್‌ಗಳ ಸಮಸ್ಯೆಯಾಗದಂತೆ ಈಗಾಗಲೇ ಮೇವು ಕಿಟ್ ಗಳನ್ನು ವಿತರಿಸಲಾಗುತ್ತಿದೆ. ಬೋರ್‌ವೆಲ್ ಇರುವವರಿಗೆ ಬೀಜ ಕೊಟ್ಟರೆ ಮೇವು ಬೆಳೆದು ಕೊಡುತ್ತಾರೆ. ಶಾಲೆಗಳನ್ನು ನಿರ್ಮಿಸುವಂತೆ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಿಗೆ ತಿಳಿಸಿದ್ದೇನೆ.

## ವ್ಯಾಪಕ ಮಳೆಯಿಂದ ಬೆಳೆ ನಾಶ, ಈರುಳ್ಳಿ ಬೆಲೆ ಏರಿಕೆ

• ಉದಯವಾಹಿನಿ, ಬೆಂಗಳೂರು

ಕಳೆದ ಕೆಲವು ತಿಂಗಳುಗಳಿಂದ ಈರುಳ್ಳಿ ಬೆಲೆಯಲ್ಲಿ ಸ್ಥಿರತೆ ಕಾಯ್ದುಕೊಂಡಿದ್ದು, ಸದ್ದಿಲ್ಲದೆ ದಿನದಿಂದ ದಿನಕ್ಕೆ ಏರುತ್ತಿದ್ದು, ಗ್ರಾಹಕರ ಕಣ್ಣಲ್ಲಿ ನೀರು ತರಿಸುತ್ತಿದೆ. ಉತ್ತರ ಕರ್ನಾಟಕ ಹಾಗೂ ಮಹಾರಾಷ್ಟ್ರ ಭಾಗದಲ್ಲಿ ವ್ಯಾಪಕ ಮಳೆಯಾಗುತ್ತಿರುವುದರಿಂದ ಬೆಳೆ ನಾಶವಾಗಿದ್ದು, ಮಾರುಕಟ್ಟೆಗೆ ನಿರೀಕ್ಷಿತ ಪ್ರಮಾಣದಲ್ಲಿ ಮಾಲು ಬಾರದಿರುವುದರಿಂದ ಬೆಲೆ ಏರಿಕೆಗೆ ಕಾರಣವಾಗಿದೆ.

ರಾಜ್ಯದಲ್ಲೇ ಹೆಚ್ಚಾಗಿ ಈರುಳ್ಳಿ ಬೆಳೆಯುವ ಪ್ರದೇಶಗಳಾದ ಬೆಳಗಾವಿ, ಬಳ್ಳಾರಿ, ರಾಯಚೂರು, ಧಾರವಾಡ, ದಾವಣಗೆರೆ ಜಿಲ್ಲೆಗಳಲ್ಲಿ ಮಳೆ ಕೈಕೊಟ್ಟ ಕಾರಣ ಬಿತ್ತನೆ ವಿಳಂಬವಾಗಿದ್ದು, ಉತ್ಪಾದನೆ ಕುಂಠಿತವಾದ ಹಿನ್ನೆಲೆಯಲ್ಲಿ ಬೆಲೆ ಏರಿಕೆಗೆ ಕಾರಣ ಒಂದೆಡೆಯಾದರೆ ರಾಜ್ಯಕ್ಕೆ ಹೆಚ್ಚಾಗಿ ಈರುಳ್ಳಿ ಸರಬರಾಜಾಗುವ ಮಹಾರಾಷ್ಟ್ರದಲ್ಲಿ ಇದೀಗ ಮಳೆಯ ಪ್ರಮಾಣ ಹೆಚ್ಚಾಗಿದ್ದರಿಂದ ಬೆಳೆ ನಾಶವಾಗಿದ್ದು, ಬೆಲೆ ಹೆಚ್ಚಳಕ್ಕೆ ಕಾರಣವಾಗಿದೆ. ಕೆಲವು ತಿಂಗಳುಗಳಿಂದ ಗುಣಮಟ್ಟದ ಈರುಳ್ಳಿ ಕೆಜಿಗೆ 25 ರೂ. ಗಳಿಂದ 30 ರೂ.ಗೆ ಮಾರಾಟವಾಗುತ್ತಿತ್ತು.

ಕಳೆದ ವಾರದಿಂದ ಕೆಜಿಗೆ ದಿಢೀರನೇ 45 ರಿಂದ 50 ರೂ.ಗೆ ಮಾರಾಟವಾಗುತ್ತಿದೆ. ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಚಿಲ್ಲರೆಯಾಗಿ 100 ರೂ.ಗೆ ಎರಡೂವರೆಯಿಂದ ಮೂರು ಕೆಜಿ ಈರುಳ್ಳಿ ಮಾರಾಟ ಮಾಡಲಾಗುತ್ತಿದೆ.

## ಕರ್ನಾಟಕದಲ್ಲಿ ಗ್ರಾಮೀಣಾಭಿವೃದ್ಧಿ ಯೋಜನೆಗಳ ಅನುಷ್ಠಾನ ಶ್ಲಾಘಿಸಿದ ಕೇಂದ್ರ ಸರ್ಕಾರದ ನಿಯೋಗ!

• ಉದಯವಾಹಿನಿ, ಬೆಂಗಳೂರು

ಕರ್ನಾಟಕಕ್ಕೆ ಸೋಮವಾರ ಭೇಟಿ ನೀಡಿರುವ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಉನ್ನತ ಮಟ್ಟದ ನಿಯೋಗ, ಭಾರತ ಸರ್ಕಾರದ ಪ್ರಮುಖ ಗ್ರಾಮೀಣಾಭಿವೃದ್ಧಿ ಯೋಜನೆಗಳ ಅನುಷ್ಠಾನವು ರಾಜ್ಯದಲ್ಲಿ ಸುಗಮವಾಗಿ ನಡೆಯುತ್ತಿದೆ ಎಂದು ಹೇಳಿದೆ. ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯವು, ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ರಾಜ್ಯಕ್ಕೆ ಅಗತ್ಯವಿರುವ ಎಲ್ಲಾ ಬೆಂಬಲವನ್ನು ನೀಡುವುದನ್ನು ಮುಂದುವರಿಸುತ್ತದೆ ಎಂದು ಅವರು ಹೇಳಿದರು. ಉಪ ಮಹಾನಿರ್ದೇಶಕ(ಡಿಡಿಜಿ) ಮತ್ತು ಸಂಖ್ಯಾಶಾಸ್ತ್ರೀಯ ಸಲಹೆಗಾರ ಅಲ್ತಾಫ್ ಹುಸೇನ್ ಹಾಜಿ ನೇತೃತ್ವದ ನಿಯೋಗವು, ರಾಜ್ಯದಲ್ಲಿ ವಿಕ್ಷಿತ್ ಭಾರತ್-ಗ್ಯಾರಂಟಿ ಫಾರ್ ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್(ಗ್ರಾಮೀಣ) (ವಿಬಿ-ಗ್ರಾಮ್ ಜಿ) ಕಾರ್ಯಕ್ರಮದ ಅನುಷ್ಠಾನವನ್ನು ಪರಿಶೀಲಿಸಲು, ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಆಯುಕ್ತೆ ದಿವ್ಯಾ ಪ್ರಭು ಅವರನ್ನು ಭೇಟಿ ಮಾಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಿಯೋಗದಲ್ಲಿ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಅಧೀನ ಕಾರ್ಯದರ್ಶಿ ಅನಿಲ್ ಕುಮಾರ್ ಕೆ ಸಿ ಮತ್ತು ಸಹಾಯಕ ನಿರ್ದೇಶಕ(ಗ್ರಾಮೀಣ ವಸತಿ) ಬಲದೇವ್ ಕುಮಾರ್ ವರ್ಮಾ ಕೂಡ ಇದ್ದರು.

- ಮುಂಬೈನಲ್ಲಿ ಮಹಾಮಳೆಗೆ 13 ಮಂದಿ ಬಲಿ,
- ಶಾಲೆ-ಕಾಲೇಜುಗಳಿಗೆ ರಜೆ, ರೆಡ್ ಅಲರ್ಟ್ ಘೋಷಣೆ
- ಉತ್ತರಾಖಂಡದಲ್ಲಿ ಭಾರಿ ಮಳೆ
- ಮುಳುಗಿದ ಶಿವನ ಪ್ರತಿಮೆ,
- ಕೊಚ್ಚಿ ಹೋದ ರಸ್ತೆಗಳು, ಕಾಲ್ನಡಿಗೆಯಲ್ಲಿಯೇ ದೇವಸ್ಥಾನ ತಲುಪಿದ ವಧು-ವರ






# ಮಹಾ ಮಳೆಗೆ ಮುಳುಗಿದ ಮುಂಬೈ

• ಉದಯವಾಹಿನಿ, ನವದೆಹಲಿ

ವಾಣಿಜ್ಯ ನಗರಿ ಮುಂಬೈನಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆ ಇಡೀ ಜನಜೀವನ ತತ್ತರಗೊಂಡಿದೆ. ಮಂಖುರ್ದ್ ಪ್ರದೇಶದಲ್ಲಿ ಭಾರೀ ಮಳೆಯಿಂದಾಗಿ ನಾಲ್ಕು ಅಂತಸ್ತಿನ ಕಟ್ಟಡವೊಂದರ ಭಾಗ ಕುಸಿದು ಬಿದ್ದು 8 ಜನರು ಸಾವನ್ನಪ್ಪಿದ್ದಾರೆ. ನಗರದಾದ್ಯಂತ ರಸ್ತೆಗಳು ಜಲಾವೃತಗೊಂಡಿದ್ದು, ಮರಗಳು ಉರುಳಿಬಿದ್ದು ಅಪಾರ ಹಾನಿ ಸಂಭವಿಸಿದೆ. ಹವಾಮಾನ ಇಲಾಖೆ ತೀವ್ರ ಮಳೆಯ ಮುನ್ನೆಚ್ಚರಿಕೆ ನೀಡಿರುವುದರಿಂದ ಮುಂಬೈ, ಥಾಣೆ, ಪಾಲ್ಘರ್ ಮತ್ತು ಪುಣೆ ಜಿಲ್ಲೆಗಳಲ್ಲಿ ಇಂದು ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ.

ಸುಮಾರಿಗೆ ಮಂಖುರ್ದ್‌ನ ಜನತಾ ನಗರದಲ್ಲಿರುವ ನಾಲ್ಕು ಅಂತಸ್ತಿನ ಚಾಲ್ ಕಟ್ಟಡದ ಒಂದು ಭಾಗ ಇದ್ದಕ್ಕಿದ್ದಂತೆ ಕುಸಿದು ಬಿದ್ದಿದೆ. ಪರಿಣಾಮವಾಗಿ ಹಲವು ಜನರು ಅವಶೇಷಗಳ ಅಡಿಯಲ್ಲಿ ಸಿಲುಕಿಕೊಂಡರು. ಮುಂಬೈ ಅಗ್ನಿಶಾಮಕ ದಳ , ಮುಂಬೈ ಪೊಲೀಸ್ ಮತ್ತು ಬಿಎಂಸಿ ಸಿಬ್ಬಂದಿ ತಕ್ಷಣವೇ ಸ್ಥಳಕ್ಕೆ ಧಾವಿಸಿ ಭಾರಿ ರಕ್ಷಣಾ ಕಾರ್ಯಾಚರಣೆ ನಡೆಸಿದರಾದರೂ, ಆರು ಜನರು ಈ ದುರಂತದಲ್ಲಿ ಸಾವನ್ನಪ್ಪಿದ್ದಾರೆ.

ಮುಂಬೈನಾದ್ಯಂತ ಹಲವೆಡೆ ಮರಗಳು ಬುಡಸಮೇತ ಉರುಳಿಬಿದ್ದಿವೆ. ಬಾಂದ್ರಾ ಮತ್ತು ವರ್ಲಿ ಭಾಗಗಳಲ್ಲೂ ಕಾರು ಹಾಗೂ ರಸ್ತೆಗಳ ಮೇಲೆ ಮರಗಳು ಬಿದ್ದಿದ್ದು, ಕೆಲವರು ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿದ್ದಾರೆ. ಇನ್ನು ಮುಂಬೈ ವಿಮಾನ ನಿಲ್ದಾಣದಲ್ಲೂ ಭಾರೀ ಮಳೆಯಿಂದಾಗಿ ಸುಮಾರು ಒಂದು ಗಂಟೆಗಳ ಕಾಲ ವಿಮಾನಗಳ ಹಾರಾಟವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿತ್ತು.

ಮಹಾರಾಷ್ಟ್ರದ ಅತ್ಯಂತ ಜನನಿಬಿಡ ರೈಲ್ವೆ ಮಾರ್ಗಗಳಲ್ಲಿ ಒಂದಾದ ಮುಂಬೈ-ಪುಣೆ ರೈಲು ಕಾರಿಡಾರ್ ಸೋಮವಾರ ಮುಂಜಾನೆ ಸಂಪೂರ್ಣ ಬಂದ್ ಆಗಿದೆ. ಕರ್ಜತ್-ಲೋನಾವಾಲ ಭೋರ್ ಘಾಟ್ ವಿಭಾಗದ ಠಾಕೂರ್ವಾಡಿ ಮತ್ತು ಮಂಕಿ ಹಿಲ್ ಬಳಿ ನಿರಂತರ ಮಳೆಯಿಂದಾಗಿ ಭಾರಿ ಭೂಕುಸಿತ ಸಂಭವಿಸಿದೆ.

ಬೆಟ್ಟದ ಮಣ್ಣು ಮತ್ತು ಬಂಡೆಗಳು ರೈಲ್ವೆ ಹಳಿಗಳ ಮೇಲೆ ಬಿದ್ದಿದ್ದರಿಂದ ಘಾಟ್ ವಿಭಾಗದ ಮೂರೂ ರೈಲ್ವೆ ಮಾರ್ಗಗಳು ಬಂದ್ ಆಗಿವೆ. ಇದರಿಂದಾಗಿ ಕೇಂದ್ರ ರೈಲ್ವೆ ಇಲಾಖೆಯು ಹಲವಾರು ಪ್ರಯಾಣಿಕ ಹಾಗೂ ದೂರದ ರೈಲುಗಳನ್ನು ರದ್ದುಗೊಳಿಸಿದೆ ಮತ್ತು ಮಾರ್ಗ ಬದಲಾವಣೆ ಮಾಡಿದೆ.

ಹಳಿಗಳ ಮೇಲಿನ ಅವಶೇಷಗಳನ್ನು ತೆರವುಗೊಳಿಸುವ ಕಾರ್ಯ ಯುದ್ಧೋಪಾದಿಯಲ್ಲಿ ಸಾಗುತ್ತಿದೆ. ಕುರ್ಲಾ ಪ್ರದೇಶದ ಗೋಮ್ಸ್ ಗೌನ್‌ನ ನವಪಾದ ಪ್ರದೇಶದಲ್ಲಿ 63 ವರ್ಷದ ಯೂನಸ್ ಕುಂದಾವಾಲ ಎಂಬ ವ್ಯಕ್ತಿಯ ಅಂಗಡಿ ಮೇಲೆ ಭಾರೀ ಮರ ಬಿದ್ದು ಸಾವನ್ನಪ್ಪಿದ್ದಾರೆ.

ಇದೇ ಘಟನೆಯಲ್ಲಿ 18 ವರ್ಷದ ಕುಮಾರ್‌ಹಸನ್ ರಾಜಾ ಮರದ ಕೊಂಬೆ ಬಿದ್ದು, ಮೃತಪಟ್ಟಿದ್ದಾರೆ.

**1** 16 ರೈಲುಗಳ ಸಂಚಾರ ರದ್ದು, 9ರೈಲುಗಳ ಮಾರ್ಗ ಬದಲಾವಣೆ

**2** ಮಹಾಮಳೆಗೆ ನಲುಗಿದ ಮುಂಬೈ

**3** ಮುಂಬೈ ಮಳೆಗೆ ಕೊಚ್ಚಿಹೋದ ಹೆದ್ದಾರಿ,

**4** ಮುಚ್ಚಿದ ಶಾಲೆ: ನೌಕರರಿಗೆ ಮನೆಯಿಂದಲೇ ಕೆಲಸ







### ಸಂಚಾರ ಅಸ್ತ್ಯವಸ್ತ

ಭಾರೀ ಮಳೆಯ ಹಿನ್ನೆಲೆ ಶಿವಾಜಿ ಮಹಾರಾಜ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಿಮಾನ ಕಾರ್ಯಾಚರಣೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಭೂಕುಸಿತದಿಂದಾಗಿ ಮುಂಬೈ-ಪುಣೆವೇಯಲ್ಲಿ ಸಂಚಾರ ಅಸ್ತವ್ಯಸ್ತಗೊಂಡಿದ್ದು, ಮುಂಬೈ ಮತ್ತು ಪುಣೆಯನ್ನು ಸಂಪರ್ಕಿಸುವ ಪ್ರಮುಖ ಮಾರ್ಗಗಳಲ್ಲಿ ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ. ಬೃಹತ್ ಮುಂಬೈ ಕಾರ್ಪೊರೇಷನ್ ಮುಂಬೈ, ರಾಯಘಡ, ಥಾಣೆಯಲ್ಲಿ ರೆಡ್ ಅಲರ್ಟ್ ಘೋಷಿಸಿರುವ ಹಿನ್ನೆಲೆ ಎಲ್ಲಾ ಸರಕಾರಿ, ಖಾಸಗಿ ಹಾಗೂ ನಾಗರಿಕ ಶಾಲಾ ಕಾಲೇಜುಗಳಿಗೆ ರಜೆ ಘೋಷಣೆ ಮಾಡಲಾಗಿದೆ. ಪುಣೆ ಜಿಲ್ಲೆಯಲ್ಲಿ ನಿರಂತರ ಮಳೆಯಿಂದಾಗಿ ಭಾರಿ ಭೂಕುಸಿತ ಸಂಭವಿಸಿದ್ದು, ಹಲವಾರು ಮನೆಗಳು ನೆಲಸಮವಾಗಿವೆ. ಮೂವರು ಅವಶೇಷಗಳಡಿ ಸಿಲುಕಿರಬಹುದು ಎಂಬ ಆತಂಕ ವ್ಯಕ್ತವಾಗಿದೆ.

### ರೆಡ್ ಅಲರ್ಟ್ ಘೋಷಣೆ

ನಾಗರಿಕರು ಪುಣೆ ಮತ್ತು ಮುಂಬೈ ನಡುವಿನ ಅನಿವಾರ್ಯವಲ್ಲದ ಪ್ರಯಾಣವನ್ನು ಮುಂದೂಡಲು ಮತ್ತು ಅಧಿಕಾರಿಗಳು ನೀಡುವ ಸಂಚಾರ ನವೀಕರಣಗಳು ಮತ್ತು ಸಲಹೆಗಳನ್ನು ಗಮನದಲ್ಲಿಟ್ಟುಕೊಳ್ಳಲು ವಿನಂತಿಸಲಾಗಿದೆ ಎಂದು ಸಲಹಾ ಸಂಸ್ಥೆ ತಿಳಿಸಿದೆ. ಖಂಡಾಲಾ ನಿರ್ಗಮನದ ಬಳಿ ಮುಂಬೈ-ಪುಣೆ ಎಕ್ಸ್‌ಪ್ರೆಸ್‌ವೇಯ ಮಿಸ್ಸಿಂಗ್ ಲಿಂಕ್ ವಿಭಾಗದಲ್ಲಿ ಪ್ರಮುಖ ಭೂಕುಸಿತ ಸಂಭವಿಸಿದೆ. ಪರಿಣಾಮವಾಗಿ, ಮುಂಬೈಗೆ ಹೋಗುವ ಮಾರ್ಗವನ್ನು ಸಂಪೂರ್ಣವಾಗಿ ಮುಚ್ಚಲಾಗಿದೆ. ಮುಂಬೈ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ನಿರಂತರ ಮಳೆಯಿಂದಾಗಿ ಸಾಮಾನ್ಯ ಜನಜೀವನ ಅಸ್ತವ್ಯಸ್ತಗೊಂಡಿದ್ದು, ಬೃಹನುಂಬೈ ಮಹಾನಗರ ಪಾಲಿಕೆ (ಬಿಎಂಸಿ) ತೀವ್ರ ಮಳೆ, ಬಲವಾದ ಗಾಳಿ ಮತ್ತು ಉಬ್ಬರವಿಳಿತದ ಬಗ್ಗೆ, ಹವಾಮಾನ ಎಚ್ಚರಿಕೆ ನೀಡಿದೆ.

ಆಸ್ಪತ್ರೆಗೆ ತಕ್ಷಣ ಕರೆದುಕೊಂಡು ಹೋದರೂ ಜೀವ ಉಳಿಯಲಿಲ್ಲ.ಇದಕ್ಕೂ ಮೊದಲು, ಸ್ಕೂಲ್ ವ್ಯಾನ್ ಮೇಲೆ ಮರ ಬಿದ್ದು, 11 ವರ್ಷದ ಹುಡುಗ, ಆಹಾನ್ ಶ್ರೀವಾತ್ಸವ್ ಮೃತಪಟ್ಟಿದ್ದರು. 60 ವರ್ಷದ ವ್ಯಕ್ತಿ ಮ್ಯಾನ್ ಹೋಲ್‌ಗೆ ಬಿದ್ದು ಸಾವನ್ನಪ್ಪಿದ್ದರು. ಮುಂಬೈನಲ್ಲಿ ನಿರಂತರ ಮಳೆಗೆ ಒಂದೇ ವಾರದಲ್ಲಿ ನಾಲ್ಕು ಮಂದಿ ಸಾವನ್ನಪ್ಪಿದ್ದು, 250ಕ್ಕೂ ಹೆಚ್ಚು ಮರಗಳು ಉರುಳಿವೆ.

### ಸಪ್ತಪದಿ ತುಳಿದ ಶಿವ-ಶಕ್ತಿ

ತ್ರಿಯುಗಿನಾರಾಯಣದ ಈ ದೇಗುಲ ರುದ್ರಪ್ರಯಾಗ್ ಜಿಲ್ಲೆಯಲ್ಲಿದ್ದು, ಈ ದೇಗುಲದಲ್ಲಿ ಸಪ್ತಪದಿ ತುಳಿದರೆ, ವಿವಾಹಿತರ ಜೀವನದಲ್ಲಿ ಖುಷಿ, ಸಂತೋಷ ತರುತ್ತದೆ ಎಂಬ ನಂಬಿಕೆ ಇದೆ. ಶಿವ ಮತ್ತು ಪಾರ್ವತಿಗೆ ಸಮರ್ಪಣೆಯಾಗಿರುವ ಈ ದೇಗುಲ ತ್ರೇತಾಯುಗದಲ್ಲಿ ನಿರ್ಮಾಣವಾಗಿತ್ತು ಎನ್ನಲಾಗಿದೆ. ಇಲ್ಲಿನ ಶಾಶ್ವತ ಕುಂಡದಲ್ಲಿ ಬೂದಿಯನ್ನು ಜನರು ಮನೆಗೆ ತೆಗೆದುಕೊಂಡು ಹೋಗುತ್ತಾರೆ. ಈ ದೇಗುಲವು ಶಿವ ಮತ್ತು ಪಾರ್ವತಿ ವಿವಾಹ ಸ್ಥಳ ಎಂದು ಮಾತ್ರವಲ್ಲದೇ, ಇತರೆ ಧಾರ್ಮಿಕ ಸ್ಥಳದಂತೆ ಕೂಡ ಪ್ರಖ್ಯಾತಿ ಪಡೆದಿದೆ. ಸುರಿದ ಭಾರೀ ಮಳೆಯಿಂದಾಗಿ ತ್ರಿಯುಗಿನಾರಾಯಣ ದೇವಸ್ಥಾನಕ್ಕೆ ತೆರಳುವ ಹೆದ್ದಾರಿ ಹಾನಿಗೊಳಗಾಗಿದ್ದು, ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತವಾಗಿದೆ. ವಧು-ವರ ದೇವಸ್ಥಾನಕ್ಕೆ ನಡೆದುಕೊಂಡು ಹೋಗಬೇಕಾಯಿತು. ಸ್ಥಳೀಯ ನಿವಾಸಿಗಳು, ವ್ಯಾಪಾರಿಗಳು ಮತ್ತು ಭಕ್ತರಿಗಾಗಿ ರಸ್ತೆಯನ್ನು ತಕ್ಷಣವೇ ಪುನಃಸ್ಥಾಪಿಸಬೇಕೆಂದು ಟ್ರೇಡ್ ಯೂನಿಯನ್ ಅಧ್ಯಕ್ಷ ಮಹೇಂದ್ರ ಸೆಮ್ವಾಲ್ ಮನವಿ ಮಾಡಿದ್ದಾರೆ.



## ಎಸ್‌ಐಆರ್ ಮೂಲಕ ಸಂವಿಧಾನ ಬದಲಾವಣೆ ಮಾಡಲು ಬಿಜೆಪಿ ಸಂಚು ರೂಪಿಸಿದೆ : ಬಿ.ಕೆ.ಹರಿಪ್ರಸಾದ್

• ಉದಯವಾಹಿನಿ, ಬೆಂಗಳೂರು

ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಮೂಲಕ ದೇಶದಲ್ಲಿ ಎರಡನೇ ಮೂರರಷ್ಟು ಅಧಿಕಾರದ ಬಲ ಪಡೆದು, ಸಂವಿಧಾನ ಬದಲಾವಣೆ ಮಾಡಲು ಬಿಜೆಪಿ ಸಂಚು ರೂಪಿಸಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಆರೋಪಿಸಿದ್ದಾರೆ. ಪಕ್ಷದ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಗೆ ಜನರ ಮನಸ್ಸನ್ನು ಗೆದ್ದು ನೇರವಾಗಿ ಅಧಿಕಾರಕ್ಕೆ ಬರಲು ಸಾಧ್ಯವಿಲ್ಲ. ಹೀಗಾಗಿ ಎಸ್‌ಐಆರ್ ಮೂಲಕ ಕೆಲ ರಾಜ್ಯಗಳ ಚುನಾವಣೆಯಲ್ಲಿ ಅಧಿಕಾರ ಗಿಟ್ಟಿಸಿಕೊಂಡಿದೆ. ಇದೇ ರೀತಿ ಎರಡನೇ ಮೂರರಷ್ಟು ಬಲಾಬಲವನ್ನು ಕ್ರೂಢೀಕರಿಸಿಕೊಂಡು ನಂತರ ಸಂವಿಧಾನ ಬದಲಾವಣೆ ಮಾಡುತ್ತಾರೆ ಎಂದು ಎಚ್ಚರಿಸಿದರು. ಬಿಜೆಪಿ ದೇಶದಲ್ಲಿ ಜೆಡಿಯು, ಅಕಾಲಿಕ ದಳ, ಶಿವಸೇನೆ, ತೃಣಮೂಲ ಕಾಂಗ್ರೆಸ್ ಸೇರಿದಂತೆ ಎಲ್ಲಾ ಪ್ರಾದೇಶಿಕ ಪಕ್ಷಗಳನ್ನು ವಿಭಜಿಸಿ, ತನ್ನ ಬೇಳೆ ಬೇಯಿಸಿಕೊಂಡಿದೆ. ಕರ್ನಾಟಕದಲ್ಲಿ ಜೆಡಿಎಸ್ ಮಾತ್ರ ಪ್ರಾದೇಶಿಕವಾಗಿ ಉಳಿದುಕೊಂಡಿದೆ. ಈಗ ಬಿಜೆಪಿಯವರು ಅದರ ಮೇಲೂ ಕಣ್ಣಿಟ್ಟಿದ್ದಾರೆ ಎಂದು ಹೇಳಿದರು. ಎರಡು ಬಾರಿ ಮುಖ್ಯಮಂತ್ರಿಯಾಗಿದ್ದ ಕುಮಾರಸ್ವಾಮಿ ಅವರಿಗೆ, ಪ್ರಹ್ಲಾದ್ ಜೋಷಿ ಅವರ ಜೊತೆ ಹೋಗುವಂತಹ ದುಃಸ್ಥಿತಿ ಬರಬಾರದಿತ್ತು. ಈ ಹಿಂದೆ ಇದೇ ಕುಮಾರಸ್ವಾಮಿ ಅವರು, ಜೋಷಿ ಅವರ ಬಗ್ಗೆ ಏನೆಂದು ಟೀಕೆ ಮಾಡಿದ್ದರು ಎಂಬುದನ್ನು ನಾನು ನೆನಪಿಸಲು ಬಯಸುವುದಿಲ್ಲ.

ಪ್ರಸ್ತುತ ಸಂದರ್ಭದಲ್ಲಿ ಬಿಜೆಪಿಯವರು, ಕುಮಾರಸ್ವಾಮಿ ಅವರನ್ನು ದಾಳವನ್ನಾಗಿ ಬಳಿಸಿ, ಬಲಿಪಶು ಮಾಡುತ್ತಿದ್ದಾರೆ ಎಂದು ಎಚ್ಚರಿಸಿದರು.

ರಾಜ್ಯದಲ್ಲಿರುವ 5.65ಕೋಟಿ ಮತದಾರರ ಪಟ್ಟಿ ಮ್ಯಾಪಿಂಗ್ ಆಗದೇ ಇರುವ 50 ಲಕ್ಷ ಜನರಿದ್ದಾರೆ. ಅವರನ್ನು ಕೈ ಬಿಡುವ ಹುನ್ನಾರ ನಡೆದಿದೆ. ರಾಮನಗರದ ಮಸೀದಿ ಅಥವಾ ಇತರ ಕಡೆಗಳಲ್ಲಿ ಎಸ್‌ಐಆರ್ ಪ್ರಕ್ರಿಯಗಳ ಬಗ್ಗೆ ಆಕ್ಷೇಪ




ವ್ಯಕ್ತವಾಗುತ್ತಿವೆ. ಜನ ಪ್ರಾತಿನಿಧ್ಯ ಕಾಯ್ದೆಯಡಿ ಜಲವಸತಿ ಶ್ರೇಯೋಭಿವೃದ್ಧಿ ಸಂಘಗಳು, ಚರ್ಚ್, ಮಸೀದಿಯಂತಹ ಧಾರ್ಮಿಕ ಆವರಣದಲ್ಲಿ ಜಾಗೃತಿ ಮೂಡಿಸಲು ಅವಕಾಶ ಇದೆ.ಆಯೋಗ ನೀಡಿರುವ ಅರ್ಜಿ ನಮೂನೆಗಳನ್ನು ಭರ್ತಿ ಮಾಡಲು ಪದವಿದಾರರಿಗೆ ಭರ್ತಿ ಮಾಡಲು ಸಾಧ್ಯವಾಗುವುದಿಲ್ಲ. ಅದಕ್ಕಾಗಿ ಮಸೀದಿಗಳಲ್ಲಿ, ದೇವಸ್ಥಾನಗಳಲ್ಲಿ ಅರ್ಜಿ ಭರ್ತಿ ಮಾಡುವ ಪ್ರಕ್ರಿಯೆಗಳಾಗಿರಬಹುದು ಇದು ತಪ್ಪಲ್ಲ ಎಂದರು.

ಈ ಹಿಂದೆ ಬಿಜೆಪಿಯವರು ಚುನಾವಣೆ ಗೆಲ್ಲಲು ನಾನಾ ರೀತಿಯ ಹುನ್ನಾರ ನಡೆಸಿದ್ದರು. ಸಿಎಎ, ಎನ್‌ಆರ್‌ಸಿ ಸೇರಿದಂತೆ ಹಲವಾರು ಕುತಂತ್ರ ನಡೆಸಿದ್ದರು. ಅದು ಸಾಧ್ಯವಾಗಲಿಲ್ಲ. ಈಗ ಎಸ್‌ಐಆರ್ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಸಚಿವ ಅಮಿತ್ ಷಾ ಕುತಂತ್ರ, ಷಡ್ಯಂತ್ರ ಹುನ್ನಾರಗಳ ಮುಖಾಂತರ ಎರಡನೇ ಮೂರರಷ್ಟು ಬಹುಮತ ಪಡೆಯಲು ಪ್ರಯತ್ನಿಸುತ್ತಿದ್ದಾರೆ.

## ಸಿಎಂ ಡಿಕೆಶಿ ವ್ಯವಸ್ಥೆ ಬುಡಮೇಲು ಮಾಡಲು ಹೊರಟಿದ್ದಾರೆ, ಹೊಸ ಎನ್ಯುಮರೇಷನ್‌ಗೆ ಆಗ್ರಹಿಸಿದ್ದೇವೆ: ಪ್ರಲ್ಹಾದ್ ಜೋಶಿ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವ್ಯವಸ್ಥೆ ಬುಡಮೇಲು ಮಾಡಲು ಹೊರಟಿದ್ದಾರೆ. ಹೊಸದಾಗಿ ಎನ್ಯುಮರೇಷನ್ ಮಾಡಲು ಆಗ್ರಹ ಮಾಡಿದ್ದೇವೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದರು.

ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ಭೇಟಿಯಾಗಿ ರಾಜ್ಯದ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಕ್ರಮ ನಡೆಯುತ್ತಿದೆ ಎಂದು ಆರೋಪಿಸಿ ದೂರು ನೀಡಿದ ಬಳಿಕ ಮಾತನಾಡಿದ ಅವರು, ಇಂದು ಎನ್‌ಡಿಎ ಪಾರ್ಟನರ್‌ಗಳು ಕರ್ನಾಟಕ ಮುಖ್ಯ ಚುನಾವಣಾ ಆಯೋಗಕ್ಕೆ ದೂರು ನೀಡಿದ್ದೇವೆ. ರಾಜ್ಯ ಸರ್ಕಾರದವರು ಕುಮ್ಮಕ್ಕು, ದಮ್ಕಿಯಿಂದ ಅಕ್ರಮವಾಗಿ ಎಸ್ ಐಆರ್ ಮಾಡುತ್ತಿದ್ದಾರೆ. ಇದನ್ನು ಪ್ರತಿಭಟಿಸಿ ದೂರು ನೀಡಿದ್ದೇವೆ. ಮದರಸಾ, ಮಸೀದಿಗಳಲ್ಲಿ, ಕಾಂಗ್ರೆಸ್‌ನ ಚುನಾಯಿತ ಪ್ರತಿನಿಧಿಗಳ ಮನೆಯಲ್ಲಿ, ಒಂದೇ ಕಮ್ಯುನಿಟಿಯ, ಆ ಸಮುದಾಯದ ನಾಯಕರ ಮನೆಯಲ್ಲಿ, ಅವರೇ ಮಾಡಿಕೊಂಡು ಬರುವಂತೆ ಮಾಡಿದ್ದಾರೆ ಎಂದು ಆರೋಪಿಸಿದರು.

ಬಿಎಲ್‌ಎಗಳನ್ನು ಕರೆದು ಮಾಡುತ್ತಿಲ್ಲ. ಈ ಬಗ್ಗೆ ದಾಖಲೆ ಇರುವ ಪೆನ್‌ಡ್ರೈವ್ ನೀಡಿದ್ದೇವೆ. ವಾಟ್ಸಆಪ್ ಗ್ರೂಪ್ ಮಾಡಿ, ಇಂತ ಸ್ಥಳಕ್ಕೆ ಬನ್ನಿ ಅಂತ ಹೇಳಿದ್ದಾರೆ. ಈ ಮೊದಲು ನಮ್ಮ ರಾಜ್ಯಾಧ್ಯಕ್ಷ ವಿಜಯೇಂದ್ರ, ಛಲವಾದಿ ನಾರಾಯಣಸ್ವಾಮಿ, ಜೆಡಿಎಸ್‌ನ ನಿಖಿಲ್ ಕುಮಾರಸ್ವಾಮಿ ದೂರು ನೀಡಿದ್ದಾರೆ. ಅಷ್ಟಾದರೂ ಸುಧಾರಣೆ ಆಗಿಲ್ಲ. ನಾವೆಲ್ಲಾ ಬಂದು ಇಂದು ಆಯೋಗಕ್ಕೆ ತೀವ್ರ ಆಗ್ರಹ ಮಾಡಿದ್ದೇವೆ. ಅನೇಕ ಉದಾಹರಣೆಗಳಿವೆ. ಉದ್ಧಟತನ ತೋರಿದ್ದು, ವಾಟ್ ಗ್ರೂಪ್, ಬಿಎಲ್?ಒಗಳ ಐಡಿ



ಕಾರ್ಡ್‌ನಲ್ಲಿ ಶಾಸಕರ ಫೋಟೋ ಹಾಕಿದ್ದಾರೆ ಎಂದು ಜೋಶಿ ಟೀಕಿಸಿದರು. ಹೊಸದಾಗಿ ಎನ್ಯುಮರೇಷನ್ ಮಾಡಬೇಕು. ಎಸ್‌ಐಆರ್ ಪ್ರಕ್ರಿಯೆ ವಿಫಲಗೊಳಿಸುವ ತಂತ್ರವಾಗಿದೆ. ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ಆದ ಬಳಿಕ, ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರದಿಂದ ಬಾಂಗ್ಲಾದೇಶದವರನ್ನು ಮತಪಟ್ಟಿಗೆ ಸೇರಿಸಲು ಅವಕಾಶ ನೀಡಿದ್ದಾರೆ.

ಈಗಾಗಲೇ ಸುಪ್ರೀಂಕೋರ್ಟ್ ಎಸ್‌ಐಆರ್ ಮಾಡಲು ಅವಕಾಶ ಇದೆ ಅಂತ ಹೇಳಿದೆ. ಅಪ್ಪ, ಅಮ್ಮ, ಕುಟುಂಬದವರಿಗೆ ಮಾತ್ರ ಅವಕಾಶ ಇದೆ. ಆದರೆ ಸಂಬಂಧಿಕರೂ ಆಗಬಹುದು ಅಂತ ಮಾಡಿದ್ದಾರೆ. ಇದನ್ನು ಕುತಂತ್ರದಿಂದ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಸಿಎಂ ಶಿವಕುಮಾರ್ ಅಕ್ರಮವಾಗಿ ಜಿಬಿಎ ವ್ಯಾಪ್ತಿಯಲ್ಲಿ ಎಸ್‌ಐಆರ್‌ಮಾಡುತ್ತಿದ್ದಾರೆ. ಅಕ್ರಮವಾಗಿ ಹಿಂಡು ಹಿಂಡಾಗಿ ಮಾಡಲಾಗುತ್ತಿದೆ. ಆಯ್ದ ಬೂತ್‌ಗಳಲ್ಲಿ ಪ್ರತ್ಯೇಕ ಎಸ್‌ಐಆರ್ ಮಾಡುತ್ತಿದ್ದಾರೆ. ನಾವೆಲ್ಲಾ ಸಲಹೆ ಕೊಟ್ಟಿರುವವರು, ಎಲ್ಲೆಲ್ಲಿ ಸಮಸ್ಯೆ ಇದೆ. ಅಲ್ಲಿ ಮಾಡಬೇಕು ಅಥವಾ ಹೊಸದಾಗಿ ಎನ್ಯುಮರೇಷನ್ ಮಾಡಬೇಕು.

# ಹೆಚ್‌ಎಂಟಿ ಪುನಶ್ಚೇತನ ಪ್ಯಾಕೇಜ್ ತಡೆಯಲು ರಾಜ್ಯ ಕಾಂಗ್ರೆಸ್ ಸರಕಾರ ಸಂಚು : ಕುಮಾರಸ್ವಾಮಿ

## ಪ್ಯಾಕೇಜ್ ಘೋಷಣೆ ಹತ್ತಿರದಲ್ಲಿ ಇರುವಾಗಲೇ ರಾಜ್ಯ ಸರಕಾರ ದುರುದ್ದೇಶದಿಂದ ಇಂತಹ ನೋಟಿಸ್ ಕೊಡಿಸಿದೆ ಎಂದು ಸಚಿವ ಕುಮಾರಸ್ವಾಮಿ ಆರೋಪ

• ಉದಯವಾಹಿನಿ, ಬೆಂಗಳೂರು

ರಾಷ್ಟ್ರದಲ್ಲಿಯೇ ಪ್ರತಿಷ್ಠಿತ ಕಾರ್ಖಾನೆಯಾಗಿದ್ದ ಹೆಚ್‌ಎಂಟಿ ಪುನಶ್ಚೇತನಕ್ಕೆ ಕೇಂದ್ರ ಸರ್ಕಾರ ಗಂಭೀರ ಪ್ರಯತ್ನ ನಡೆಸುತ್ತಿರುವ ಬೆನ್ನಲ್ಲಿಯೇ ರಾಜ್ಯ ಕಾಂಗ್ರೆಸ್ ಸರಕಾರವು ಅರಣ್ಯ ಇಲಾಖೆಯನ್ನು ಛೂ ಬಿಟ್ಟು ಅಡ್ಡಿಪಡಿಸಲು ಪ್ರಯತ್ನ ಮಾಡುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಅತ್ಯಂತ ಗಂಭೀರ ಆರೋಪ ಮಾಡಿದರು.

ಕೆಲ ಮಾಧ್ಯಮಗಳಲ್ಲಿ ಹೆಚ್‌ಎಂಟಿಗೆ ರಾಜ್ಯ ಅರಣ್ಯ ಇಲಾಖೆ ನೋಟಿಸ್ ನೀಡಿ ಭೂಮಿ ತೆರವು ಮಾಡಲು ಗಡುವು ವಿಧಿಸಿದೆ ಎಂಬ ವರದಿಗಳು ಬಂದ ಹಿನ್ನೆಲೆಯಲ್ಲಿ ತುರ್ತು ಮಾಧ್ಯಮಗೋಷ್ಠಿ ನಡೆಸಿದ ಕೇಂದ್ರ ಸಚಿವರು ಈಗಾಗಲೇ ಇದಕ್ಕೆ ಸಂಬಂಧಿಸಿದ ವ್ಯಾಜ್ಯ ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿದೆ. ಇಂತಹ ಸೂಕ್ಷ್ಮ ಸಂದರ್ಭದಲ್ಲಿ ರಾಜ್ಯ ಸರಕಾರವು ಅರಣ್ಯ ಇಲಾಖೆಯ ಮೂಲಕ ಗಡುವು ವಿಧಿಸಿ ನೋಟಿಸ್ ನೀಡಿರುವುದು ನ್ಯಾಯಾಂಗ ನಿಂದನೆ ಹಾಗೂ ಕಾನೂನುಬಾಹಿರ ಕೂಡ ಆಗುತ್ತದೆ ಎಂದು ಸ್ಪಷ್ಟಪಡಿಸಿದರು. ಹೆಚ್‌ಎಂಟಿ ವಶದಲ್ಲಿರುವ 430 ಎಕರೆ ಜಮೀನು ಅರಣ್ಯ ಪ್ರದೇಶ ಆಗಿರುವುದರಿಂದ



ಕೂಡಲೇ ಅಷ್ಟು ಜಾಗವನ್ನು ಅರಣ್ಯ ಇಲಾಖೆಗೆ ಬಿಟ್ಟುಕೊಡಬೇಕು ಎಂದು ಬೆಂಗಳೂರು ನಗರ ಉಪ ಅರಣ್ಯ ಸಂರಕ್ಷಣಾಧಿಕಾರಿ (ಡಿಸಿಎಫ್) ಎನ್.ರವೀಂದ್ರ ಕುಮಾರ್ ಆದೇಶ ನೀಡಿರುವುದು ನ್ಯಾಯಾಂಗ ಕಲಾಪಗಳಿಗೆ ಅಡ್ಡಿಪಡಿಸಿದಂತೆ ಆಗುತ್ತದೆ. ಅಲ್ಲದೆ ಈ ಅಧಿಕಾರಿಗೆ

### ಭೂಮಿ ಭೂಗಳ್ಳರ ಪಾಲಾಗಬಾರದು

ಯಾವುದೇ ಕಾರಣಕ್ಕೂ ಈ ಭೂಮಿ ಭೂಗಳ್ಳರ ಪಾಲಾಗಬಾರದು ಎಂದು ಆಗಲೇ ಈ ಭೂಮಿಯ ಕ್ರಯಕ್ಕೆ ತಡೆ ಕೊಟ್ಟೆ. ಬೆಂಗಳೂರು ನಗರವನ್ನು ಸಿಂಗಾಪುರ ಮಾಡುತ್ತೇವೆ ಎಂದು ಹೊರಟವರ ಸರಕಾರದಲ್ಲಿ ಯಾವುದೇ ಎಗ್ಗಿಲ್ಲದೆ ಹೆಚ್‌ಎಂಟಿ ಭೂಮಿಯನ್ನು ರಣಹದ್ದುಗಳಂತೆ ಕಿತ್ತು ತಿನ್ನಲಾಯಿತು ಎಂದು ಕುಮಾರಸ್ವಾಮಿ ಅವರು ಗಂಭೀರ ಆರೋಪ ಮಾಡಿದರು.ಹೆಚ್‌ಎಂಟಿ ಕಾರ್ಖಾನೆಯ ವಿಶೇಷ ಪ್ಯಾಕೇಜ್ ಕುರಿತಂತೆ ಮುಂದಿನ ವಾರ ಸಭೆ ನಡೆಯಬೇಕಿತ್ತು.

ಅಂತಹ ಆದೇಶ ನೀಡುವ ಅಧಿಕಾರ ವ್ಯಾಪ್ತಿಯು ಇರುವುದಿಲ್ಲ. ಈ ಬಗ್ಗೆ ಹೆಚ್‌ಎಂಟಿ ನ್ಯಾಯಾಲಯದಲ್ಲಿಯೇ ಪ್ರಶ್ನೆ ಮಾಡುತ್ತದೆ ಎಂದು ಸಚಿವರು ಹೇಳಿದರು.

ಅನೇಕ ವರ್ಷಗಳಿಂದ ನಷ್ಟದ ಸುಳಿಗೆ ಸಿಲುಕಿ ನೆನೆಗುದಿಗೆ ಬಿದ್ದಿದ್ದ ಹೆಚ್‌ಎಂಟಿ ಕಾರ್ಖಾನೆಗೆ ಮರುಜೀವ ನೀಡುವ ಉದ್ದೇಶದಿಂದ ನಾನು ಪ್ರಧಾನ ಮಂತ್ರಿಗಳು ಮತ್ತು ಕೇಂದ್ರದ ಹಣಕಾಸು ಸಚಿವರನ್ನು ಒಪ್ಪಿಸಿ ವಿಶೇಷ ಪ್ಯಾಕೇಜ್ ತರುವ ಬಗ್ಗೆ ಪ್ರಯತ್ನ ಮಾಡುತ್ತಿದ್ದೆ. ಈ ಕಾರ್ಖಾನೆಯು ನಾನು ಸಚಿವನಾಗಿರುವ ಬೃಹತ್ ಕೈಗಾರಿಕೆ ಇಲಾಖೆಯ ವ್ಯಾಪ್ತಿಗೆ ಬರುತ್ತದೆ. ಪ್ಯಾಕೇಜ್ ಘೋಷಣೆ ಹತ್ತಿರದಲ್ಲಿ ಇರುವಾಗಲೇ ರಾಜ್ಯ ಸರಕಾರ ದುರುದ್ದೇಶದಿಂದ ಇಂತಹ ನೋಟಿಸ್ ಕೊಡಿಸಿದೆ ಎಂದು ಸಚಿವ ಕುಮಾರಸ್ವಾಮಿ ಆರೋಪ ಮಾಡಿದರು.ಈ ಭೂಮಿಯು ಸುಮಾರು 15,000 ಕೋಟಿ ಬೆಲೆ ಬಾಳುತ್ತದೆ ಎಂದು ಈ ಅಧಿಕಾರಿ ಮಹಾಶಯ ಆ ಭೂಮಿಗೆ ಬೆಲೆ ಕಟ್ಟಿದ್ದಾರೆ. ಅಂದ ಮೇಲೆ ಈ ಭೂಮಿಯ ಮೇಲೆ ಯಾರದೋ ಕಾಕದೃಷ್ಟಿ ಬಿದ್ದಿರಬೇಕು ಎಂಬುದು ನನ್ನ ಅನುಮಾನ. ಈಗಾಗಲೇ ಹೆಚ್‌ಎಂಟಿ ಭೂಮಿಯನ್ನು ಇದೇ ಸರಕಾರದ ಕೃಪೆಯಿಂದ ಅನೇಕರು ಕೊಳ್ಳೆ ಹೊಡೆದಿದ್ದಾರೆ. 175 ಎಕರೆ ಭೂಮಿಯು ಯಾವಾಗ ಮಾರಾಟವಾಯಿತು, ಎಲ್ಲಿ ನೋಂದಣಿ ಆಯಿತು ಎನ್ನುವ ಎಲ್ಲಾ ದಾಖಲೆಗಳು ನನ್ನಲ್ಲಿವೆ. ಆ ಜಾಗದಲ್ಲಿ ಯಾರು ಯಾರು ಮನೆ ಕಟ್ಟಿಕೊಂಡಿದ್ದಾರೆ, ಲೂಟಿ ಹೊಡೆದ ಭೂಮಿಯಲ್ಲಿ ಬಹುಮಹಡಿ ಕಟ್ಟಡಗಳು ಎದ್ದು ನಿಂತಿವೆ.

ದೊಡ್ಡದೊಡ್ಡ ಅಪಾರ್ಟ್ಮೆಂಟ್‌ಗಳು ಬಂದಿವೆ. ಆಗ ಅರಣ್ಯ ಇಲಾಖೆ ನೋಟಿಸ್ ನೀಡಿತ್ತಾ ಎಂದು ಕೇಂದ್ರ ಸಚಿವರು ಪ್ರಶ್ನಿಸಿದರು. 2006ರಲ್ಲಿ ನಾನು ಮುಖ್ಯಮಂತ್ರಿ ಆಗುವ ತನಕ ಹೆಚ್‌ಎಂಟಿ ಭೂಮಿಯ ಲೂಟಿ ನಡೆಯುತ್ತಲೇ ಇತ್ತು.

**ಈ ದಿನದ ದರ** ಪೆಟ್ರೋಲ್: 111.68₹/L | ಡೀಸೆಲ್ : 99.56₹/L | ಬಂಗಾರ: ₹ 14,662/Gram 24ct ₹13,440/Gram 22ct | ಬೆಳ್ಳಿ: ₹245.00/Gram

# 300 ಕೋಟಿ ರೂ. ಗೋಲ್ಮಾಲ್ ಆರೋಪ; ಕಾಂಗ್ರೆಸ್ ಕಾರ್ಯಕರ್ತರಿಂದ ಮುತ್ತಿಗೆ ಯತ್ನ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಹಿರಿಯ ಶಾಸಕ ಎಸ್. ಸುರೇಶ್ ಕುಮಾರ್ ಅವರ ವಿರುದ್ಧ ಗಂಭೀರ ಆರೋಪ ಕೇಳಿ ಬಂದಿದ್ದು, ಮುಖ್ಯಮಂತ್ರಿ ಮೂಲಸೌಕರ್ಯ ಅಭಿವೃದ್ಧಿ ಅನುದಾನ ಹಾಗೂ ಪಾಲಿಕೆ ವತಿಯಿಂದ ಕೈಗೊಳ್ಳಲಾದ ವಿವಿಧ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಗಳಲ್ಲಿ ನಿಯಮಬಾಹಿರವಾಗಿ ಬೇನಾಮಿ ಗುತ್ತಿಗೆದಾರರಿಗೆ ಲಾಭ ಮಾಡಿಕೊಟ್ಟಿದ್ದಾರೆ ಎಂದು ಆರೋಪಿಸಲಾಗಿದೆ. ರಾಜಾಜಿನಗರ ಬಿಜೆಪಿ ಶಾಸಕ ಸುರೇಶ್ ಕುಮಾರ್ ಅವರು 300 ಕೋಟಿ ರೂಪಾಯಿ ಟೆಂಡರ್ ಅಕ್ರಮ ಎಸಗಿದ್ದಾರೆ ಎಂದು ಆರೋಪಿಸಿ, ಕಾಂಗ್ರೆಸ್ ಕಾರ್ಯಕರ್ತರು ಸೋಮವಾರ ಪ್ರತಿಭಟನೆ ನಡೆಸಿದರು.

ಸುರೇಶ್ ಕುಮಾರ್ ಅವರು ರಾಜಾಜಿನಗರದ ಆರ್‌ಟಿಒ ಕಚೇರಿಯಲ್ಲಿ


ಉದಯವಾಹಿನಿ ಚಿತ್ರ

ಜನಸ್ಪಂದನ ಕಾರ್ಯಕ್ರಮ ನಡೆಸುತ್ತಿದ್ದ ವೇಳೆ ಯೂತ್ ಕಾಂಗ್ರೆಸ್ ಕಾರ್ಯಕರ್ತರು, ಶಾಸಕರಿಗೆ ಮುತ್ತಿಗೆಗೆ ಹಾಕಲು ಯತ್ನಿಸಿದರು. ಈ ವೇಳೆ ಬಿಜೆಪಿ ಹಾಗೂ ಕಾಂಗ್ರೆಸ್ ಕಾರ್ಯಕರ್ತರ ನಡುವೆ ಭಾರೀ ಹೈಡ್ರಾಮಾವೇ ನಡೆಯಿತು. ಕಾಂಗ್ರೆಸ್ ಕಾರ್ಯಕರ್ತರು ಭಾರೀ ಸಂಖ್ಯೆಯಲ್ಲಿ ಪ್ರತಿಭಟನೆಗೆ ಆಗಮಿಸುತ್ತಿದ್ದಂತೆ ಎಚ್ಚೆತ್ತ ಪೊಲೀಸರು ಆರ್‌ಟಿಒ ರಸ್ತೆ ಕ್ಲೋಸ್ ಮಾಡಿದ್ದಾರೆ. ರಸ್ತೆಯ ಎರಡು ಬದಿಗೆ ಬ್ಯಾರಿಕೇಡ್ ಹಾಕಿ ರಸ್ತೆ ಬಂದ್ ಮಾಡಿಸಿದ್ದಾರೆ. ಜೊತೆಗೆ ಜನಸ್ಪಂದನ ಕಾರ್ಯಕ್ರಮ ನಡೆಯುತ್ತಿದ್ದ ಕಚೇರಿ ಮುಂಭಾಗದಲ್ಲಿ ಪೊಲೀಸ್ ಬಿಗಿ ಬಂದೋಬಸ್ತ್ ಮಾಡಿದ್ದಾರೆ.

ಸುರೇಶ್ ಕುಮಾರ್ ಅವರ ವಿರುದ್ಧ ಧಿಕ್ಕಾರ ಕೂಗುತ್ತಲೇ ಆರ್‌ಟಿಒ ಕಚೇರಿ ಬಳಿ ಆಗಮಿಸಿದ ಕಾಂಗ್ರೆಸ್ ಕಾರ್ಯಕರ್ತರು, ಆರ್‌ಟಿಒ ಕಚೇರಿ ಒಳನುಗ್ಗಲು ಯತ್ನಿಸಿದ್ದಾರೆ. ಇದೇ ವೇಳೆ ಬಿಜೆಪಿ ಕಾರ್ಯಕರ್ತರು ಮುಖಾಮುಖಿಯಾಗಿದ್ದು, ಕೈಕೈ ಮಿಲಾಯಿಸುವ ಹಂತಕ್ಕೆ ಹೋಗಿದ್ದಾರೆ.

# ಬೊಮ್ಮಾಯಿ ವಿರುದ್ಧ ಎಚ್.ಕೆ. ಪಾಟೀಲ್ ಆಕ್ರೋಶ

• ಉದಯವಾಹಿನಿ, ಬೆಂಗಳೂರು

ಗದಗ ಮತದಾರರ ಪಟ್ಟಿಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಸಚಿವ ಎಚ್.ಕೆ. ಪಾಟೀಲ್ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ನಡುವಿನ ರಾಜಕೀಯ ಜಟಾಪಟಿ ತೀವ್ರಗೊಂಡಿದೆ.

ತಮ್ಮ ವಿರುದ್ಧ ಸುಳ್ಳು ಆರೋಪ ಮಾಡಿರುವ ಬೊಮ್ಮಾಯಿ ಬಹಿರಂಗ ಕ್ಷಮೆ ಕೇಳಬೇಕು ಎಂಬ ಎಚ್.ಕೆ. ಪಾಟೀಲ್ ಆಗ್ರಹವನ್ನು ಮಾಜಿ ಸಿಎಂ ಬೊಮ್ಮಾಯಿ ತಳ್ಳಿಹಾಕಿದ್ದು, ನಾನು ಕ್ಷಮೆ ಕೇಳುವ ಪ್ರಶ್ನೆಯೇ ಇಲ್ಲ, ಅವರ ಬೇಡಿಕೆ ಹಾಸ್ಯಾಸ್ಪದ ಎಂದು ತಿರುಗೇಟು ನೀಡಿದ್ದಾರೆ. ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿ ಇತ್ತೀಚೆಗೆ ಪತ್ರಿಕಾಗೋಷ್ಠಿ ನಡೆಸಿ, ಗದಗ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಗದಗ ಶಾಸಕ ಹಾಗೂ ಸಚಿವ ಎಚ್.ಕೆ. ಪಾಟೀಲ್ (ಹನುಮಂತಗೌಡ ಕೃಷ್ಣಗೌಡ ಪಾಟೀಲ್) ಅವರ ಹೆಸರು ಮೂರು ಬಾರಿ ದಾಖಲಾಗಿದೆ ಎಂದು ಗಂಭೀರ ಆರೋಪ ಮಾಡಿದ್ದರು. ಬೊಮ್ಮಾಯಿ ಅವರ ಆರೋಪಕ್ಕೆ ಗದಗದಲ್ಲಿ ಭರ್ಜರಿ ಕೌಂಟರ್ ನೀಡಿದ ಎಚ್.ಕೆ. ಪಾಟೀಲ್, ತಮ್ಮದೇ ಹೆಸರು ಮತ್ತು ತಂದೆಯ ಹೆಸರನ್ನು ಹೊಂದಿರುವ ಇಬ್ಬರು ಸ್ಥಳೀಯ ನಾಗರಿಕರನ್ನು ಮಾಧ್ಯಮಗಳ ಮುಂದೆ ಖುದ್ದಾಗಿ ಹಾಜರುಪಡಿಸಿದರು. ಮೂವರ ಆಧಾರ್ ಕಾರ್ಡ್‌ಗಳನ್ನು ಪ್ರದರ್ಶಿಸಿದ ಸಚಿವರು, ಮತದಾರರ ಪಟ್ಟಿಯಲ್ಲಿರುವುದು ಕಳ್ಳ ಹೆಸರಲ್ಲ. ಅವರೂ ಸಹ ನಮ್ಮ ಕ್ಷೇತ್ರದ ಗೌರವಾನ್ವಿತ ನಾಗರಿಕರು. ಬಸವರಾಜ ಬೊಮ್ಮಾಯಿ ಅನುಭವಿ ಮತ್ತು ಬುದ್ಧಿವಂತ ರಾಜಕಾರಣಿ. ಆದರೂ ನನ್ನ ವ್ಯಕ್ತಿತ್ವ ಹರಣ ಮಾಡುವ ರೀತಿಯಲ್ಲಿ ಹೇಳಿಕೆ ನೀಡಿರುವುದು ಆಶ್ಚರ್ಯ ತಂದಿದೆ.

## ಆಂಬ್ಯುಲೆನ್ಸ್‌ಗೆ ದಾರಿ ಬಿಡದ ವೀಲ್ಡಿಂಗ್ ಪುಂಡರು,ವೈರಲ್, ಸಾರ್ವಜನಿಕರ ಆಕ್ರೋಶ!

• ಉದಯವಾಹಿನಿ, ಬೆಂಗಳೂರು

ವೀಲ್ಡಿಂಗ್ ಪುಂಡರು ಆಂಬ್ಯುಲೆನ್ಸ್‌ಗೆ ದಾರಿ ಬಿಡದೆ ತೊಂದರೆ ನೀಡಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಬೆಳಗಿನ ಜಾವ 2.30 ರ ಸುಮಾರಿಗೆ ಈ ಘಟನೆ ನಡೆದಿದ್ದು, ಗೋರಗುಂಟೆಪಾಳ್ಯದಿಂದ ಯಶವಂತಪುರದವರೆಗೂ ಬೈಕ್ ಸವಾರರು ಪುಂಡಾಟ ಮೆರೆದಿದ್ದಾರೆ.

ತುರ್ತು ವೈದ್ಯಕೀಯ ಆರೈಕೆಯ ಅಗತ್ಯವಿದ್ದ ರೋಗಿಯನ್ನು ಹೊತ್ತೊಯ್ಯುತ್ತಿದ್ದ ಆಂಬ್ಯುಲೆನ್ಸ್ ಸೈರನ್ ಮೊಳಗಿಸಿಕೊಂಡು ತೆರಳುತಿತ್ತು. ಆದರೆ, ಸೈರನ್ ಕೇಳದಂತೆ ಐದರಿಂದ ಆರು ಬೈಕ್ ಸವಾರರು ರಸ್ತೆ ತುಂಬೆಲ್ಲಾ ವೀಲ್ಡಿಂಗ್ ಪುಂಡಾಟ ನಡೆಸುತ್ತಿದ್ದರು ಎಂದು ಹೇಳಲಾಗಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ಈ ಘಟನೆಯ ವಿಡಿಯೋ ವೈರಲ್ ಆಗಿದ್ದು, ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ರೋಗಿಯು ಆಂಬ್ಯುಲೆನ್ಸ್‌ನಲ್ಲಿ ಮಲಗಿರುವುದನ್ನು ಸಹ ತೋರಿಸಲಾಗಿದೆ.

## ನಾನು ಇರೋವರೆಗೂ ರಾಜ್ಯದಲ್ಲಿ ಪಥಸಂಚಲನಕ್ಕೆ ಅನುಮತಿ ಕಡ್ಡಾಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಾನು ಗೃಹಸಚಿವನಾಗಿ ಇರುವವರೆಗೂ ರಾಜ್ಯದಲ್ಲಿ ಆರ್‌ಎಸ್‌ಎಸ್ ಪಥಸಂಚಲನಕ್ಕೆ ಅನುಮತಿ ಕಡ್ಡಾಯ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಹಾಗೂ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ನಡುವಿನ ಸಂಘರ್ಷ ಹೊಸ ತಿರುವು ಪಡೆದುಕೊಂಡಿದೆ. ಅವಕಾಶ ಸಿಕ್ಕಾಗಲೆಲ್ಲಾ ಆರ್.ಎಸ್.ಎಸ್ ವಿರುದ್ಧ ವಾಗ್ದಾಳಿ ನಡೆಸುವ ಸಚಿವ ಪ್ರಿಯಾಂಕ್ ಖರ್ಗೆ ಇದೀಗ ಸಂಘಕ್ಕೆ ಮತ್ತೊಂದು ಬಿಗ್ ಶಾಕ್ ನೀಡಿದ್ದಾರೆ.

ನಾನು ಸಚಿವನಾಗಿ ಇರುವವರೆಗೂ ರಾಜ್ಯದಲ್ಲಿ ಆರ್‌ಎಸ್‌ಎಸ್ ಪಥಸಂಚಲನ ನಡೆಸಲು ಅನುಮತಿ ಪಡೆಯುವುದು ಕಡ್ಡಾಯ ಎಂದು ಎಚ್ಚರಿಕೆ ನೀಡಿದ್ದಾರೆ. ರಾಷ್ಟ್ರೀಯ ಸ್ವಯಂ ಸೇವಕ ಸಂಘ ಮತ್ತು ಕರ್ನಾಟಕ ಸರ್ಕಾರದ ನಡುವೆ ಮತ್ತೊಂದು ಹೊಸ ಸಮರ ಆರಂಭವಾಗುವ ಎಲ್ಲಾ ಲಕ್ಷಣಗಳೂ ಗೋಚರಿಸಿವೆ.

ಕಲಬುರಗಿಯ ಮಾತನಾಡಿದ ಪ್ರಿಯಾಂಕ್ ಖರ್ಗೆ, ನಾನು ಈಗಾಗಲೇ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಪತ್ರ ಬರೆದಿದ್ದೇನೆ. 100 ವರ್ಷದ ಹಳೆಯ ಸಂಘಟನೆ ಅಂತಾರಲ್ಲ, ನಿಮ್ಮ ಸಂಘಟನೆಯ ದಾಖಲೆಗಳು ಎಲ್ಲಿವೆ? ಪಥಸಂಚಲನ ನಡೆಸಲು ನೀವು ಕಡ್ಡಾಯವಾಗಿ ಅನುಮತಿ ಪಡೆಯಲೇಬೇಕು. ದಾಖಲೆಗಳು ಎಲ್ಲೋ ಇರಬಹುದು, ಹುಡುಕಿಕೊಂಡು ಬರಲಿ. ಅಲ್ಲಿಯವರೆಗೆ ಸುಮ್ಮನೆ ಬಿಡಲ್ಲ ಎಂದು ಲೇವಡಿ ಮಾಡಿದ್ದಾರೆ.

ಘಟನೆಯ ಬಗ್ಗೆ ಪ್ರಶ್ನಿಸಿದ್ದಕ್ಕೆ ಬಿಜೆಪಿ ಮತ್ತು ಆರ್‌ಎಸ್‌ಎಸ್ ಬೆಂಬಲಿಗರು ನನ್ನ ವೈಯಕ್ತಿಕ ವಿಚಾರಗಳನ್ನು ಕೆದಕುತ್ತಿದ್ದಾರೆ ಎಂದು ಪ್ರಿಯಾಂಕ್ ಆಕ್ರೋಶ ವ್ಯಕ್ತಪಡಿಸಿದರು. ಪ್ರಿಯಾಂಕ್ ಯಾರನ್ನ ಮದುವೆಯಾಗಿದ್ದಾನೆ? ಆತನ ಮಕ್ಕಳು ಯಾರು? ಪ್ರಿಯಾಂಕ್ ಕಪ್ಪಗಿದ್ದಾನಾ ಅಥವಾ ಬೆಳ್ಳಗಿದ್ದಾನಾ? ಎಂದು ಕೆದಕುತ್ತಿದ್ದಾರೆ.

ಅವರು ಎಷ್ಟೇ ಕೆದಕಿದರೂ ನಾನು ಹೆದರುವ ವ್ಯಕ್ತಿಯಲ್ಲ. ನನ್ನ ಬಣ್ಣದ ಬಗ್ಗೆ ಮಾತನಾಡುವವರಿಗೆ ನನ್ನ ಕೆಲಸಗಳೇ ಉತ್ತರ ನೀಡುತ್ತವೆ ಎಂದು ಸವಾಲು ಹಾಕಿದ್ದಾರೆ.

## 'ಖಬರ್ದಾರ್ ಕುಮಾರಣ್ಣ' ಎಂದಾಗ ನಿಮ್ಮ ಕಳಕಳಿ ಎಲ್ಲಿತ್ತು?


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

'ಜೀನ್' ಎನ್ನುವ ಪದವನ್ನು ನಾನು ರಾಮನಗರದಲ್ಲಿ ನಡೆದ ಸಾಮೂಹಿಕ ಎಸ್‌ಐಆರ್ ಅರ್ಜಿ ವಿತರಣೆ ಮತ್ತು ಕುಣಿಗಲ್‌ನ ಬೂತ್ ಸಂಖ್ಯೆ 19ರ ವಿದ್ಯಮಾನಕ್ಕೆ ಹೋಲಿಸಿ ಸಾಮಾನ್ಯ ಅರ್ಥದಲ್ಲಿ ಬಳಸಿದ್ದೇನೆಯೇ ಹೊರತು, ಯಾವುದೇ ವೈಯಕ್ತಿಕ ನಿಂದನೆಯ ಉದ್ದೇಶವಿರಲಿಲ್ಲ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ. ಈ ಬಗ್ಗೆ ತಮ್ಮ 'ಎಕ್ಸ್' ಖಾತೆಯಲ್ಲಿ ಕುಣಿಗಲ್ ಶಾಸಕ ಡಾ. ಎಚ್.ಡಿ.ರಂಗನಾಥ್ ಅವರನ್ನು ಉಲ್ಲೇಖಿಸಿ ಬರೆದಿರುವ ಅವರು, ಎಚ್.ಡಿ.ದೇವೇಗೌಡರ ರಾಜಕಾರಣ ಹಾಗೂ ಆದರ್ಶಗಳನ್ನು ಹತ್ತಿರದಿಂದ ಕಂಡು ಬೆಳೆದವನು ನಾನು. ಯಾರ ವಿರುದ್ಧವೂ ವೈಯಕ್ತಿಕ ವಾಗ್ದಾಳಿ ನಡೆಸುವುದು ನನ್ನ ರಾಜಕೀಯ ಸಂಸ್ಕಾರವಲ್ಲ. ನನಗೆ ನಂಬಿಕೆಯೂ ಇಲ್ಲ ಎಂದು ಕುಣಿಗಲ್ ಶಾಸಕ ಡಾ. ಹೆಚ್.ಡಿ. ರಂಗನಾಥ್ ಅವರ ಹೇಳಿಕೆಗೆ ತಿರುಗೇಟು ನೀಡಿದ್ದಾರೆ. ಹೆಚ್.ಡಿ. ದೇವೇಗೌಡರ ಆದರ್ಶಗಳಲ್ಲಿ ಬೆಳೆದ ನನಗೆ ಯಾರ ವಿರುದ್ಧವೂ ವೈಯಕ್ತಿಕ ವಾಗ್ದಾಳಿ ನಡೆಸುವುದು ಸಂಸ್ಕಾರವಲ್ಲ ಅವರು ಹೇಳಿದ್ದಾರೆ.

ಹಿಂದೆ ಜೆಡಿಎಸ್‌ನಲ್ಲಿದ್ದು ಬೇರೆ ಪಕ್ಷದಲ್ಲಿರುವ ಶಾಸಕರು ನನ್ನ ತಂದೆ, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ವಿರುದ್ಧ ದಿನನಿತ್ಯ ಕೀಳು ಮಟ್ಟದ ವೈಯಕ್ತಿಕ ದಾಳಿ ಮಾಡುತ್ತಿರುವಾಗ ನಿಮ್ಮ ಕಳಕಳಿ ಎಲ್ಲಿ ಹೋಗಿತ್ತು ಎಂದು ಪ್ರಶ್ನಿಸಿದ್ದಾರೆ. ಕುಮಾರಣ್ಣನವರ ರಾಜಕೀಯ ಅನುಭವಕ್ಕಿಂತಲೂ ಕಡಿಮೆ ವಯಸ್ಸಿನ ಶಾಸಕರೊಬ್ಬರು 'ಖಬರ್ದಾರ್ ಕುಮಾರಣ್ಣ' ಎಂದು ಧಮಕಿ ಹಾಕಿದಾಗ ನೀವು ಧ್ವನಿ ಎತ್ತಿದ್ದರೆ ನಿಮ್ಮ ನಿಲುವನ್ನು ನಾವು ಗೌರವಿಸುತ್ತಿದ್ದೆವು.

## ಆಗಸ್ಟ್ ಮೊದಲ ವಾರದಲ್ಲಿ ಸಚಿವ ಸಂಪುಟ ವಿಸ್ತರಣೆ ಸಾಧ್ಯತೆ: ರಾಮಲಿಂಗಾ ರೆಡ್ಡಿ

• ಉದಯವಾಹಿನಿ, ಬೆಂಗಳೂರು

ಶೀಘ್ರದಲ್ಲೇ ಸಚಿವ ಸಂಪುಟ ವಿಸ್ತರಣೆ ಶೀಘ್ರದಲ್ಲೇ ನಡೆಯಬಹುದು ಎಂದು ಸಚಿವ ರಾಮಲಿಂಗಾರೆಡ್ಡಿ ಸುಳಿವು ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಗಸ್ಟ್ ಮೊದಲು ವಿಸ್ತರಣೆ ಆಗಬಹುದು ಎಂದು ಸೂಚಿಸಿದರು. ಹೊಸ ಸಚಿವರನ್ನು ಸೇರಿಸಿಕೊಳ್ಳುವ ಸಮಯದ ಬಗ್ಗೆ ಕೇಳಿದಾಗ, ಜಲಸಂಪನ್ಮೂಲ ಖಾತೆಯನ್ನು ಹೊಂದಿರುವ ರೆಡ್ಡಿ, ವಿಧಾನಸಭೆ ಅಧಿವೇಶನಕ್ಕೂ ಮುನ್ನ ಪೂರ್ಣ ಸಚಿವ ಸಂಪುಟ ಜಾರಿಯಾಗಬೇಕಾಗಿರುವುದರಿಂದ ಈ ಪ್ರಕ್ರಿಯೆ ಶೀಘ್ರದಲ್ಲೇ ನಡೆಯಬಹುದು ಎಂದು ಹೇಳಿದರು.

ವಿಧಾನಸಭೆ ಅಧಿವೇಶನ ಆಗಸ್ಟ್‌ನಲ್ಲಿದೆ. ಅಧಿವೇಶನ ಪ್ರಾರಂಭವಾಗುವ ಮೊದಲು ಇಡೀ ಸಚಿವ ಸಂಪುಟ ಅಸ್ತಿತ್ವದಲ್ಲಿರಬೇಕು, ಏಕೆಂದರೆ ಪ್ರಸ್ತುತ ಸುಮಾರು 20 ಖಾತೆಗಳನ್ನು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹೊಂದಿದ್ದಾರೆ.

ಹೀಗಾಗಿ ಶೀಘ್ರದಲ್ಲೇ ಸಂಪುಟ ವಿಸ್ತರಣೆ ಆಗಬೇಕು ಎಂದು ಅವರು ಹೇಳಿದರು. ಕರ್ನಾಟಕದ ಮುಂದಿನ ಸಚಿವರ ತಂಡವನ್ನು ಪಕ್ಷದ ಹೈಕಮಾಂಡ್ ನಿರ್ಧರಿಸಲಿದೆ ಎಂದು ಶಿವಕುಮಾರ್ ಹೇಳಿದ್ದಾರೆ. ಕರ್ನಾಟಕ ಸಚಿವ ಸಂಪುಟವು ಪ್ರಸ್ತುತ ಮುಖ್ಯಮಂತ್ರಿ ಸೇರಿದಂತೆ 14 ಸಚಿವರನ್ನು ಹೊಂದಿದೆ, ಆದರೆ ರಾಜ್ಯವು 34 ಸಚಿವರನ್ನು ಹೊಂದಬಹುದಾಗಿದೆ ಸಚಿವ ಸ್ಥಾನಗಳಿಗಾಗಿ ಶಾಸಕರಲ್ಲಿ ತೀವ್ರ ಲಾಬಿ ನಡೆಯುತ್ತಿದೆ, ಅವರಲ್ಲಿ ಕೆಲವರು ಇತ್ತೀಚೆಗೆ ತಮ್ಮ ಹಕ್ಕುಗಳನ್ನು ಚಲಾಯಿಸಲು ದೆಹಲಿಗೆ ಭೇಟಿ ನೀಡಿದ್ದಾರೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

# ಚುನಾವಣಾಧಿಕಾರಿಗಳಿಗೆ NDA ನಾಯಕರಿಂದ ದೂರು ಸಲ್ಲಿಕೆ!

## SIR ನಡೆಸಬೇಕಾದ ಅಧಿಕಾರಿಗಳು ಅನುಮೋದಿತ ಪ್ರಕ್ರಿಯೆಯ ಬಗ್ಗೆ ಶೂನ್ಯ ಗೌರವ ತೋರಿಸುತ್ತಿದ್ದಾರೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯಲ್ಲಿ ಭಾರಿ ಅಕ್ರಮಗಳು ನಡೆದಿವೆ ಎಂದು ಆರೋಪಿಸಿ ಎನ್‌ಡಿಎ ನಾಯಕರ ನಿಯೋಗ ಸೋಮವಾರ ರಾಜ್ಯ ಮುಖ್ಯ ಚುನಾವಣಾ ಅಧಿಕಾರಿ ವಿ ಅನ್ಬುಕುಮಾರ್ ಅವರಿಗೆ ಔಪಚಾರಿಕ ದೂರು ಸಲ್ಲಿಸಿದ್ದು, ಮನೆ-ಮನೆಗೆ ಮರು ತೆರಳಿ ಪರಿಶೀಲನೆಯನ್ನು ಕಡ್ಡಾಯಗೊಳಿಸಬೇಕೆಂದು ಒತ್ತಾಯಿಸಿದೆ.

ಈ ಅಕ್ರಮಗಳಿಗೆ ಕಾರಣರಾದ ಎಲ್ಲಾ ಅಧಿಕಾರಿಗಳು ಮತ್ತು ರಾಜಕೀಯ ಕಾರ್ಯಕರ್ತರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆಯೂ ನಾಯಕರು ಒತ್ತಾಯಿಸಿದ್ದಾರೆ. ಕೇಂದ್ರ ಸಚಿವ ಮತ್ತು ಜೆಡಿ(ಎಸ್) ನಾಯಕ ಎಚ್ ಡಿ ಕುಮಾರಸ್ವಾಮಿ, ಬಿಜೆಪಿಯ ಪ್ರಹ್ಲಾದ್ ಜೋಶಿ ಮತ್ತು ಶೋಭಾ ಕರಂದ್ಲಾಜೆ, ಕರ್ನಾಟಕ ವಿಧಾನಸಭೆ ಮತ್ತು ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಆರ್ ಅಶೋಕ ಮತ್ತು ಛಲವಾದಿ ನಾರಾಯಣಸ್ವಾಮಿ ಅವರನ್ನು ಒಳಗೊಂಡ ನಿಯೋಗವು ಸಿಇಒ ಅನ್ಬು ಕುಮಾರ್ ಅವರನ್ನು ಭೇಟಿ ಮಾಡಿ ದೂರು ಸಲ್ಲಿಸಿದೆ.

ಕರ್ನಾಟಕದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಭಾರಿ ಅಕ್ರಮಗಳ ಬಗ್ಗೆ ಗಂಭೀರ ಕಳವಳ ವ್ಯಕ್ತಪಡಿಸಲು ಎನ್ ಡಿ ಎ ನಾಯಕರು, ನಡೆಸಬೇಕಾದ ಅಧಿಕಾರಿಗಳು ಅನುಮೋದಿತ ಪ್ರಕ್ರಿಯೆಯ ಬಗ್ಗೆ ಶೂನ್ಯ ಗೌರವ ತೋರಿಸುತ್ತಿದ್ದಾರೆ, ಇದರಿಂದಾಗಿ ಪ್ರಜಾಪ್ರಭುತ್ವದ ಚೈತನ್ಯವನ್ನೇ ಹಾಳು ಮಾಡುತ್ತಿದ್ದಾರೆ ಎಂದು ನಾಯಕರು ಪತ್ರದಲ್ಲಿ ತಿಳಿಸಿದ್ದಾರೆ.

ರಾಮನಗರ, ಯಶವಂತಪುರ, ಜಯನಗರ, ಇಂಡಿ, ಕುಣಿಗಲ್, ಪಾವಗಡ ಸೇರಿದಂತೆ ರಾಜ್ಯದ ಹಲವು ಭಾಗಗಳಲ್ಲಿ ಈ ಲೋಪಗಳು ಕಂಡುಬಂದಿವೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಇದಕ್ಕಾಗಿಯೇ ವಾಟ್ಸಾಪ್ ಗುಂಪುಗಳನ್ನು ಸಹ ರಚಿಸಲಾಗಿದೆ ಈ ಸಂಬಂಧ ರಾಜ್ಯದ ಹಲವಾರು ಇತರ ಭಾಗಗಳಿಂದ ಹಲವಾರು ದೂರುಗಳನ್ನು ಸ್ವೀಕರಿಸಲಾಗುತ್ತಿದೆ ಎಂದು ಅವರು ಹೇಳಿದರು.

ಇಂತಹ ಕ್ರಮವು ಸ್ಥಾಪಿತ ಎಸ್‌ಐಆರ್ ಮಾರ್ಗಸೂಚಿಗಳ ಉಲ್ಲಂಘನೆಯಾಗಿದೆ ಮತ್ತು ಚುನಾವಣಾ ಪ್ರಕ್ರಿಯೆಯ ತಟಸ್ಥತೆ ಮತ್ತು ಜಾತ್ಯತೀತ ಸ್ವಭಾವದ ಬಗ್ಗೆ ಗಂಭೀರ ಕಳವಳವನ್ನು ಹುಟ್ಟುಹಾಕುತ್ತದೆ.

ಮತದಾರರ ಪಟ್ಟಿಯ ಸಮಗ್ರತೆಯನ್ನು ಬಲಪಡಿಸಲು ಎಸ್‌ಐಆರ್ ಅನ್ನು ನಡೆಸಲಾಗುತ್ತದೆ, ಆದರೆ ಬಿಎಲ್‌ಒಗಳು


ಉದಯವಾಹಿನಿ ಚಿತ್ರ

ವಿಪಕ್ಷಗಳಿಗೆ ಸಿಎಂ ತಿರುಗೇಟು

ಈ ಪ್ರಕ್ರಿಯೆಯನ್ನು ನಡೆಸುವ ವಿಧಾನವು ಪರಿಷ್ಕರಣೆಯ ಉದ್ದೇಶವನ್ನೇ ಬುಡ ಮೇಲು ಮಾಡುತ್ತಿದೆ ಎಂದು ಅವರು ಹೇಳಿದರು. ಇದರಿಂದ ಸಮರ್ಥನೀಯವಲ್ಲದ ಮತ್ತು ವಿಶ್ವಾಸಾರ್ಹವಲ್ಲದ ಮತದಾರರ ಪಟ್ಟಿ ಸೃಷ್ಟಿಯಾಗುತ್ತದೆ ಎಂದು ನಿಯೋಗ ಆರೋಪಿಸಿದೆ. ಜೂನ್ 30 ರಂದು ಪ್ರಾರಂಭವಾದ ಕರ್ನಾಟಕದಲ್ಲಿ ಎಸ್‌ಐಆರ್‌ನ ಮನೆ-ಮನೆ ಗಣತಿ ಹಂತವು ಜುಲೈ 29ರವರೆಗೆ ಮುಂದುವರಿಯುತ್ತದೆ.

### ಮನೆ-ಮನೆಗೆ ತೆರಳಿ ಪರಿಶೀಲನೆ

ಜಿಲ್ಲಾ ಚುನಾವಣಾ ಅಧಿಕಾರಿ ನಿರ್ದೇಶನದ ಮೇರೆಗೆ ಬೂತ್ ಮಟ್ಟದ ಅಧಿಕಾರಿಗಳು ಮಾರ್ಗಸೂಚಿಗಳ ಪ್ರಕಾರ ಕಡ್ಡಾಯವಾಗಿ ಮನೆ-ಮನೆಗೆ ತೆರಳಿ ಪರಿಶೀಲನೆ ನಡೆಸಬೇಕು ಮತ್ತು ಪ್ರತಿ ಮನೆಯ ಸದಸ್ಯರ ಗುರುತನ್ನು ವೈಯಕ್ತಿಕವಾಗಿ ಪರಿಶೀಲಿಸಬೇಕು ಎಂದಿದ್ದಾರೆ.

ಮನೆ ಮನೆಗೆ ತೆರಳಿ ಮಾಡಬೇಕಾದ ಮತದಾರರ ಪಟ್ಟಿ ಪರಿಷ್ಕರಣೆಯನ್ನು ಹಲವೆಡೆ ಸಾಮೂಹಿಕವಾಗಿ, ಮಸೀದಿಗಳು ಮತ್ತು ಚೌಲ್ಟ್ರಿಗಳಂತಹ ಸ್ಥಳಗಳಲ್ಲಿ ನಡೆಸಲಾಗುತ್ತಿದೆ. ಅನರ್ಹರನ್ನು ಮತದಾರರ ಪಟ್ಟಿಗೆ ಸೇರಿಸಲು ನಕಲಿ ದಾಖಲೆಗಳನ್ನು ಸೃಷ್ಟಿಸಿ ಬೂತ್ ಮಟ್ಟದ ಅಧಿಕಾರಿಗಳ (ಬಿಎಲ್‌ಒ) ಮೇಲೆ ಒತ್ತಡ ಹೇರಲಾಗುತ್ತಿದೆ ಎಂದು ಬಿಜೆಪಿ ಮತ್ತು ಜೆಡಿಎಸ್ ನಾಯಕರು ಆರೋಪಿಸಿದ್ದಾರೆ.

ಕರ್ನಾಟಕ ಸರ್ಕಾರವು ಪ್ರಾರಂಭಿಸಿದ 'ಐದು ಖಾತರಿಗಳು' ಈಗ ರಾಷ್ಟ್ರಮಟ್ಟದಲ್ಲಿ ಅನುಕರಿಸಲ್ಪಡುತ್ತಿವೆ. ನಾವು ಐದು ಖಾತರಿ ಯೋಜನೆಗಳನ್ನು ನೀಡಿದ್ದೇವೆ. ಜನರಿಗೆ ಆರ್ಥಿಕ ನೆರವು ನೀಡಲು ನಾವು ಈ ಖಾತರಿಗಳನ್ನು ಪರಿಚಯಿಸಿದ್ದೇವೆ. ನಾವು ಜಾರಿಗೆ ತಂದ ನಿರ್ಧಾರಗಳನ್ನು ಈಗ ಕೇಂದ್ರ ಸರ್ಕಾರವೂ ಅಳವಡಿಸಿಕೊಳ್ಳುತ್ತಿದೆ. ಕರ್ನಾಟಕವು ಇತರರಿಗೆ ಮಾದರಿಯಾಗಿದೆ ಎಂದು ಹೇಳಿದರು. ಸಿಎಂ ಡಿಕೆ ಶಿವಕುಮಾರ್

## ಜಾಗೃತಿ ಮೂಡಿಸುತ್ತಿರುವುದಕ್ಕೆ NDA ನಾಯಕರುಗಳಿಗೆ ಆತಂಕ



ರಾಜ್ಯದಲ್ಲಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಸರ್ಕಾರ ಯಾವುದೇ ರೀತಿಯ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಚುನಾವಣಾ ಆಯೋಗಕ್ಕೆ NDA ನೀಡಿದ ದೂರಿನ ಕುರಿತು ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಿವಕುಮಾರ್, ಎಸ್ ಐ ಆರ್ ಬಗ್ಗೆ ಸರ್ಕಾರ ಸೃಷ್ಟಿಸುತ್ತಿರುವ ದೊಡ್ಡ ಪ್ರಮಾಣದ ಜಾಗೃತಿಯಿಂದ ವಿರೋಧ ಪಕ್ಷವು ಚಿಂತಿತವಾಗಿದೆ ಎಂದು ಹೇಳಿದ್ದಾರೆ. ಬಡವರು ಮತ್ತು ಅಲ್ಪಸಂಖ್ಯಾತರನ್ನು ಸಬಲೀಕರಣಗೊಳಿಸುವ ಸರ್ಕಾರದ ಪ್ರಯತ್ನಗಳು ವಿರೋಧ ಪಕ್ಷದ ಹತಾಶೆಗೆ ಕಾರಣ ಎಂದು ಹೇಳಿದರು. ಸರ್ಕಾರವು NDA ಪ್ರಕ್ರಿಯೆಯಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ. ಸರ್ಕಾರವು ಈ ಪ್ರಕ್ರಿಯೆಯ ಬಗ್ಗೆ ಇಷ್ಟು ದೊಡ್ಡ ಪ್ರಮಾಣದಲ್ಲಿ ಜಾಗೃತಿ ಮೂಡಿಸುತ್ತಿರುವುದರಿಂದ ವಿರೋಧ ಪಕ್ಷವು ಚಿಂತಿತವಾಗಿದೆ. ಸುಮಾರು 45 ಮಿಲಿಯನ್ (4.5 ಕೋಟಿ) ಜನರು ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಪಡೆದಿದ್ದಾರೆ. ಅವರಿಗೆ ಈ ಪ್ರಮಾಣಪತ್ರಗಳನ್ನು ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡುವ ಸೌಲಭ್ಯವನ್ನು ನೀಡಲಾಗಿದೆ. ಬಡವರು ಮತ್ತು ಅಲ್ಪಸಂಖ್ಯಾತರು ತೊಂದರೆಗಳನ್ನು ಎದುರಿಸಬೇಕೆಂದು ಮಾತ್ರ ವಿರೋಧ ಪಕ್ಷವು ಬಯಸುತ್ತದೆ ಎಂದು ಶಿವಕುಮಾರ್ ಹೇಳಿದರು. ಬಾಂಗ್ಲಾದೇಶಿ ವಲಸಿಗರು ಎಲ್ಲಿದ್ದಾರೆಂದು ನಮಗೆ ತಿಳಿಸಿ. ಅವರು ಅಲ್ಲಿದ್ದರೆ, ನಿಮ್ಮ ಸರ್ಕಾರ ಅಧಿಕಾರದಲ್ಲಿದ್ದಾಗ ಏಕೆ ಕ್ರಮ ಕೈಗೊಳ್ಳಲಿಲ್ಲ ಎಂದು ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಅವರನ್ನು ಪ್ರಶ್ನಿಸಿದರು ಅವರು ಎಷ್ಟು ಬೇಕಾದರೂ ಟೀಕಿಸಲಿ. ಟೀಕೆಗಳು ಮಾಯವಾಗುತ್ತವೆ, ಆದರೆ ಒಳ್ಳೆಯ ಕೆಲಸಗಳು ಉಳಿಯುತ್ತವೆ ಎಂದು ಅವರು ಹೇಳಿದರು. ಪ್ರಜಾಪ್ರಭುತ್ವ ಹಕ್ಕುಗಳನ್ನು ರಕ್ಷಿಸುವಲ್ಲಿ NDA ಪ್ರಕ್ರಿಯೆಯ ಮಹತ್ವವನ್ನು ಒತ್ತಿ ಹೇಳಿದ ಅವರು, ಪ್ರತಿಯೊಬ್ಬರೂ ಮತದಾನದ ಹಕ್ಕನ್ನು ಪಡೆಯುವುದನ್ನು ನಾವು ಖಚಿತಪಡಿಸಿಕೊಳ್ಳುತ್ತಿದ್ದೇವೆ. ನಾವು ಮಾಡಿದ ಕೆಲಸವನ್ನು ವಿರೋಧ ಪಕ್ಷಗಳು ಪ್ರಶಂಸಿಸಬೇಕು.

## ಫುಟ್‌ಪಾತ್ ತೆರವು ಕಾರ್ಯಾಚರಣೆ: ಜುಲೈ 8ರಂದು ಬೀದಿ ವ್ಯಾಪಾರಿಗಳಿಂದ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಪಾದಚಾರಿ ಮಾರ್ಗಗಳ ಮೇಲೆ ವ್ಯಾಪಾರಿಗಳ ತೆರವು ಕಾರ್ಯಾಚರಣೆಗೆ ಬೀದಿ ಬದಿ ವ್ಯಾಪಾರಿಗಳ ಸಂಘ ವಿರೋಧ ವ್ಯಕ್ತಪಡಿಸಿದೆ. ರಾಜ್ಯ ಸರ್ಕಾರ ವ್ಯಾಪಾರಕ್ಕೆ ಸೂಕ್ತ ಸ್ಥಳ ನಿಗದಿ ಮಾಡದೇ ಅಕ್ರಮವಾಗಿ ತೆರವು ಅಭಿಯಾನ ನಡೆಸುತ್ತಿದೆ ಎಂದು ಆರೋಪಿಸಿದೆ.

ಬೀದಿ ಬದಿ ವ್ಯಾಪಾರಿಗಳನ್ನು ಒಕ್ಕಲೆಬ್ಬಿಸುತ್ತಿರುವುದರ ವಿರುದ್ಧ ಜುಲೈ 8ರಂದು ಫ್ರೀಡಂ ಪಾರ್ಕ್‌ನಲ್ಲಿ ಬೆಂಗಳೂರು ಬೀದಿ ವ್ಯಾಪಾರಿಗಳ ಸಂಘದಿಂದ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಘೋಷಿಸಿದೆ. ತಮ್ಮ ಬೇಡಿಕೆಗಳನ್ನು ಈಡೇರಿಸದಿದ್ದರೆ ರಾಜ್ಯಾದ್ಯಂತ ಆಂದೋಲನ ನಡೆಸಲಾಗುವುದು ಎಂದು ಎಚ್ಚರಿಸಿದೆ.

ಬೀದಿ ಬದಿ ವ್ಯಾಪಾರಿಗಳನ್ನು ತೆರವು ಮಾಡುತ್ತಿಲ್ಲ. ಸ್ಥಳಾಂತರ ಮಾಡಲಾಗುತ್ತಿದೆ ಎಂಬ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ಹೇಳಿಕೆಯನ್ನ ಸಂಘವು ತಿರಸ್ಕರಿಸಿದೆ. ಯಾವುದೇ ವ್ಯಾಪಾರಿಗಳಿಗೆ ಪರ್ಯಾಯ ಸ್ಥಳ ನಿಗದಿ ಮಾಡದೇ ತೆರವು ಮಾಡಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದೆ.

ಎಐಸಿಸಿಟಿಯು ವಕೀಲ ವಿನಯ್ ಶ್ರೀನಿವಾಸನ್ ಮಾತನಾಡಿ, ಸಚಿವರ ಹೇಳಿಕೆ ಸುಳ್ಳು. ಯಾರಿಗೂ ಪರ್ಯಾಯ ಸ್ಥಳ ನಿಗದಿ ಮಾಡಿಲ್ಲ. ಬೀದಿ ಬದಿ ವ್ಯಾಪಾರಿಗಳನ್ನು ಸ್ಥಳಾಂತರ ಮಾಡಿಲ್ಲ. ಬದಲಿಗೆ ತೆರವು ಮಾಡಲಾಗಿದೆ. ರಸ್ತೆ ಬದಿಯಿಂದ ಅವರನ್ನು ಎತ್ತಂಗಡಿ ಮಾಡಿದ ಬಳಿಕ ಅವರು ಎಲ್ಲಿಗೆ ಹೋಗಬೇಕು ಎಂದು ಪ್ರಶ್ನಿಸಿದರು. ಸರ್ಕಾರದ ನೀತಿಯು ಶ್ರೀಮಂತರಿಗೆ ಅನುಕೂಲಕರವಾಗಿದೆ. ಬಡ ಕುಟುಂಬಗಳ ಜೀವನೋಪಾಯಕ್ಕೆ ಕೊಡಲಿ ಏಟು ಬಿದ್ದಿದೆ. ನಗರದ ಸಮಸ್ಯೆಗಳಿಗೆ ಬೀದಿ ವ್ಯಾಪಾರಿಗಳು ಕಾರಣವಲ್ಲ. ಕಾರು ಪಾರ್ಕಿಂಗ್‌ಗೆ ಜಾಗವನ್ನು ನಿಗದಿಪಡಿಸಿದಂತೆ ಪಾದಚಾರಿ ಮಾರ್ಗಗಳ ಒಂದು ಬದಿಯಲ್ಲಿ ವ್ಯಾಪಾರ ನಡೆಸಲಾಗುತ್ತಿದೆ ಎಂದು ಅವರು ಹೇಳಿದರು.

ಬೀದಿ ವ್ಯಾಪಾರಿಗಳು (ಜೀವನೋಪಾಯ ರಕ್ಷಣೆ ಮತ್ತು ಬೀದಿ ವ್ಯಾಪಾರಿಗಳ ನಿಯಂತ್ರಣ) ಕಾಯ್ದೆ-2014ರ ಪ್ರಕಾರ ಜನರು ವ್ಯಾಪಾರ ನಡೆಸುವ ಹಕ್ಕು ಹೊಂದಿದ್ದಾರೆ. ಬೀದಿ ವ್ಯಾಪಾರಿಗಳನ್ನು ಅತಿಕ್ರಮಣಕಾರರು ಎಂದು ತಪ್ಪಾಗಿ ಬಿಂಬಿಸಲಾಗುತ್ತಿದೆ ಎಂದು ನವ ಕರ್ನಾಟಕ ರಾಜ್ಯ ಬೀದಿ ವ್ಯಾಪಾರಿಗಳ ಸಂಘದ ಕೇಶವ ಮೂರ್ತಿ ಅಸಮಾಧಾನ ವ್ಯಕ್ತಪಡಿಸಿದರು.ಅಧಿಕಾರಿಗಳು ಬೀದಿ ಬದಿ ವ್ಯಾಪಾರಿಗಳ ಸಮೀಕ್ಷೆ ನಡೆಸಿ, ಮಾರಾಟಗಾರರಿಗೆ ಗುರುತಿನ ಚೀಟಿಗಳನ್ನು ನೀಡಲು ವಿಫಲರಾಗಿದ್ದಾರೆ.

ಅವರ ವೈಫಲ್ಯದಿಂದಾಗಿ ಇಂದು ಸಂಕಷ್ಟ ಎದುರಿಸಬೇಕಿದೆ ಎಂದು ಆಕ್ರೋಶ ಹೊರಹಾಕಿದರು.

ಬೆಂಗಳೂರಿನಲ್ಲಿ ಸುಮಾರು 1.5 ಲಕ್ಷ ಬೀದಿ ವ್ಯಾಪಾರಿಗಳು ಇದ್ದಾರೆ. ಪಿಎಂ ಸ್ವನಿಧಿ ಯೋಜನೆಯಡಿ ಸುಮಾರು 80 ಸಾವಿರ ವ್ಯಾಪಾರಿಗಳು ಸಾಲ ಪಡೆದಿದ್ದರೂ, ಅಕ್ಟೋಬರ್ 2024 ಮತ್ತು ಫೆಬ್ರವರಿ 2025ರ ನಡುವೆ ನಡೆಸಿದ ಸಮೀಕ್ಷೆಯಲ್ಲಿ ಸುಮಾರು 34 ಸಾವಿರ ಮಾರಾಟಗಾರರನ್ನು ಮಾತ್ರ ಗುರುತಿಸಲಾಗಿದೆ. ಇದರಿಂದಾಗಿ, ಸಾವಿರಾರು ಜನರಿಗೆ ಅಧಿಕೃತ ಮಾನ್ಯತೆ ಸಿಕ್ಕಿಲ್ಲ.

## ಚಂದಾ ಹಣ ಚೋರಿ:ಆರ್‌ಎಸ್‌ಎಸ್‌ನಿಂದ ಚಂದಮಾಮ ಕತೆ

• ಉದಯವಾಹಿನಿ, ಬೆಂಗಳೂರು

ಅಯೋಧ್ಯೆಯ ರಾಮಮಂದಿರದ ನಂತರ ದೇಶದ ಇತರೆ ದೇವಾಲಯಗಳ ಹುಂಡಿಗಳಲ್ಲೂ ಚಂದಾ ಚೋರಿ ಪ್ರಕರಣಗಳು ವರದಿಯಾಗುತ್ತಿರುವುದು ಆಘಾತಕರ ಬೆಳವಣಿಗೆಯಾಗಿದೆ. ಚಂದಾ ಚೋರಿ ಬಗ್ಗೆ ಬಿಜೆಪಿ ಮತ್ತು ಆರ್.ಎಸ್.ಎಸ್ ನಾಯಕರು ದೇಶದ ಜನರಿಗೆ ಚಂದಮಾಮ ಕಥೆ ಹೇಳುತ್ತಿದ್ದಾರೆ ಎಂದು ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ ಡಾ. ಆನಂದ ಕುಮಾರ್ ವ್ಯಂಗ್ಯವಾಡಿದ್ದಾರೆ.

ಇದು ಬಿಜೆಪಿಯ ಹುಂಡಿಹಣ ದರೋಡೆ ಮಾಡುವ ಆಧುನಿಕ ''ಭಕ್ತಿ ಪಂಥ''ವಾಗಿದೆ. ದೇವರನ್ನೇ ಹಗಲು ದೋರೋಡೆ ಮಾಡುತ್ತಿರುವಾಗ ಪ್ರಧಾನಿ ನರೇಂದ್ರ ಮೋದಿ ತಮಗೂ ಇದಕ್ಕೂ ಸಂಬಂಧವೇ ಇಲ್ಲ ಎಂಬಂತೆ ಇಂಡೋನೇಷ್ಯಾ, ಆಸ್ಟ್ರೇಲಿಯಾ ಪ್ರವಾಸಕ್ಕೆ ತೆರಳಿದ್ದಾರೆ. ಧಾರ್ಮಿಕ ಕ್ಷೇತ್ರಗಳಿಗೆ


ಉದಯವಾಹಿನಿ ಚಿತ್ರ

ದಾಳಿ ಮಾಡುತ್ತಿರುವಾಗ ಮೋದಿ ಪಲಾಯನವಾದದ ಕುತಂತ್ರ ಅನುಸರಿಸುತ್ತಿದ್ದಾರೆ. ಪ್ರತಿಯೊಂದನ್ನೂ ಟೀಕಿಸುವ ಗೃಹ ಸಚಿವ ಅಮಿತ್ ಶಾ, ಕೇಂದ್ರ ಸಚಿವರು ಮೌನಿ ಬಾಬಾಗಳಾಗಿದ್ದು, ಭೋರ್ಗರೆಯುತ್ತಿದ್ದ ಬಿಜೆಪಿ ಸಾಮಾಜಿಕ ಜಾಲತಾಣ ಸ್ಥಬ್ದವಾಗಿದೆ. ಭಕ್ತಿಯ ಹೆಸರಿನಲ್ಲಿ ಭ್ರಷ್ಟಾಚಾರ ನಡೆಸುತ್ತಿದ್ದರೂ ಬಿಜೆಪಿಯಲ್ಲಿ ಪಾಪಪ್ರಜ್ಞೆ ಕಾಡುತ್ತಿಲ್ಲ ಎಂದಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಭಕ್ತರ ಹಣ ದೇವರ ಸೇವೆಗೆ ಬಳಕೆಯಾಗಬೇಕೆ ಹೊರತು ಭ್ರಷ್ಟರ ಜೇಬು ತುಂಬಿಸಲು ಅಲ್ಲ. ಹುಂಡಿ ದೋಚುವುದು ಕಳ್ಳತನವಷ್ಟೇ ಅಲ್ಲದೇ ಅದು ಕೋಟ್ಯಂತರ ಭಕ್ತರ ನಂಬಿಕೆಯ ಮೇಲಿನ ಧಾರ್ಮಿಕ ದಾಳಿಯಾಗಿದೆ.


ದೇವಾಲಯ ನಂಬಿಕೆ, ಭಕ್ತಿ, ಸಂಸ್ಕೃತಿ ಮತ್ತು ಧರ್ಮದ ಸಂಕೇತ.

ಆದರೆ ಇತ್ತೀಚಿನ ದಿನಗಳಲ್ಲಿ ದೇಶದ ವಿವಿಧ ಭಾಗಗಳಲ್ಲಿ ದೇವಾಲಯಗಳ ಹುಂಡಿಗಳಲ್ಲಿ ಹಗಲು ದರೋಡೆ ಮಾಡುತ್ತಿದ್ದಾರೆ. ಅವ್ಯವಹಾರ ಮತ್ತು ಲೆಕ್ಕಪತ್ರಗಳಲ್ಲಿನ ಅಕ್ರಮಗಳ ಆರೋಪಗಳು ಹೆಚ್ಚುತ್ತಿರುವುದು ಭಕ್ತರನ್ನು ತೀವ್ರವಾಗಿ ಬಾಧಿಸುತ್ತಿದೆ ಎಂದಿದ್ದಾರೆ.

## ಮಾನವೀಯ ಮೌಲ್ಯಗಳಿಂದ ಉತ್ತಮ ಸಮಾಜ ನಿರ್ಮಾಣ: ನಿಶ್ಚಲಾನಂದನಾಥ ಶ್ರೀ

• ಉದಯವಾಹಿನಿ, ಕೆಂಗೇರಿ

ಜಾತಿ ಮತ ಪಂಥಗಳ ಎಲ್ಲೆ ಮೀರಿ ಮಾನವೀಯ ಮೌಲ್ಯಗಳನ್ನು ಪ್ರತಿಪಾದಿಸಿ ಉತ್ತಮ ಸಮಾಜ ನಿರ್ಮಾಣಕ್ಕೆ ಪ್ರೇರಕ ಶಕ್ತಿಯಾಗಿದ್ದ ಕೆಂಪೇಗೌಡರು ಪ್ರಾತಃ ಸ್ಮರಣೀಯರು ಎಂದು ವಿಶ್ವ ಒಕ್ಕಲಿಗ ಮಹಾ ಸಂಸ್ಥಾನ ಮಠದ ಪೀಠಾಧಿಪತಿಗಳಾದ ಶ್ರೀ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ಬಣ್ಣಿಸಿದರು.ಅಂದ್ರಹಳ್ಳಿ ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘ ರಾಮಸ್ವಾಮಿ ಬಡಾವಣೆಯಲ್ಲಿ ಆಯೋಜಿಸಿದ್ದ ನಾಡಪ್ರಭು ಕೆಂಪೇಗೌಡರ 517ನೇ ಜಯಂತೋತ್ಸವ ಹಾಗೂ ಸಂಘದ ಮೂರನೇ ವರ್ಷ ದ ವಾರ್ಷಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ನಾಡಪ್ರಭು


ಉದಯವಾಹಿನಿ ಚಿತ್ರ

ಕೆಂಪೇಗೌಡರ ದೂರ ದೃಷ್ಟಿ ಚಿಂತನೆಗಳ ಫಲವಾಗಿ ಇಂದು ಬೆಂಗಳೂರು ವಿಶ್ವಮಾನ್ಯ ತೆಯನ್ನು ಪಡೆದಿದೆ ಎಂದರು. ಕೆರೆಕಟ್ಟೆಗಳನ್ನು ನಿರ್ಮಾಣ ಮಾಡಿ, ಸಸಿಗಳನ್ನು ನೆಟ್ಟು ಪರಿಸರ ಸಮತೋಲನದೊಂದಿಗೆ ಉತ್ತಮವಾದ ಹವಾಮಾನ ಹೊಂದಲು ಅವರ ಮುಂದಾಲೋಚನೆಯೇ ಕಾರಣ ಎಂದರು. ವಿಧಾನ ಪರಿಷತ್ ಸದಸ್ಯ ಟಿ.ಎನ್. ಜವರಾಯಿಗೌಡ ಮಾತನಾಡಿ ನಾಡು ಪ್ರಭು ಕೆಂಪೇಗೌಡರ ತತ್ವಸಿದ್ಧಾಂತ ಆದರ್ಶಗಳನ್ನು ಮೈಗೂಡಿಸಿಕೊಂಡು ಕಾರ್ಯನಿರ್ವಹಿಸುವ ಮೂಲಕ ನಿತ್ಯವೂ ನೆನಪಿಸಿ ಕೊಂಡು ಅವರಿಗೆ ಗೌರವ ಸಲ್ಲಿಸಬೇಕಿದೆ ಎಂದರು.

ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಕೆ.ಎನ್. ಮಲ್ಲೇಶ್ ಮಾತನಾಡಿ ವಿಶ್ವ ಭೂಪಟದಲ್ಲಿ ಬೆಂಗಳೂರು ನಗರಕ್ಕೆ ತನ್ನದೇ ಆದ ವಿಶಿಷ್ಟ ಸ್ಥಾನಮಾನ ದೊರೆತಿರುವ ಹಿಂದೆ ನಾಡು ಪ್ರಭು ಕೆಂಪೇಗೌಡರ ಅಪಾರ ಕೊಡುಗೆ ಇದೆ ಎಂದರು. ಎಲ್ಲ ಸಮುದಾಯದವರು ಪ್ರೀತಿ ವಿಶ್ವಾಸ ,ಬಾಂಧವ್ಯ ಮತ್ತು ಸಾಮರಸ್ಯದಿಂದ ಬದುಕುವ ವಾತಾವರಣ ನಿರ್ಮಾಣ ಮಾಡುವ ಮೂಲಕ ಮಾದರಿಯಾಗಿದ್ದರು ಎಂದು ಬಣ್ಣಿಸಿದರು.

## ಕಟ್ಟಡದ ಮೇಲಿಂದ ಜಿಗಿಯುವುದಾಗಿ ಮಹಿಳೆ ಬೆದರಿಕೆ!

### ಪ್ರಾಥಮಿಕ ತನಿಖೆಯಲ್ಲಿ ಮಹಿಳೆ ತನ್ನನ್ನು ವ್ಯಕ್ತಿಯೊಬ್ಬ ಮೋಸ ಮಾಡಿದ್ದಾನೆ : ಆರೋಪ

• ಉದಯವಾಹಿನಿ, ಬೆಂಗಳೂರು

ನಗರದ ಹುಳಿಮಾವು ವ್ಯಾಪ್ತಿಯ ದೊಡ್ಡಕಮ್ಮನಹಳ್ಳಿಯಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು. 38 ವರ್ಷದ ಮಹಿಳೆಯೊಬ್ಬರು ತಮ್ಮ ನಾಲ್ಕು ವರ್ಷದ ಮಗನೊಂದಿಗೆ ಐದು ಅಂತಸ್ತಿನ ಕಟ್ಟಡ ಏರಿ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಬೆದರಿಕೆ ಹಾಕಿದ್ದು, ಸುಮಾರು ಎರಡು ಗಂಟೆಗಳ ಕಾಲ ನಡೆದ ಮನವೊಲಿಕೆ ಬಳಿಕ ಪೊಲೀಸರು ಮತ್ತು ಅಗ್ನಿಶಾಮಕ ಸಿಬ್ಬಂದಿ ಮಹಿಳೆಯನ್ನು ಸುರಕ್ಷಿತವಾಗಿ ಕೆಳಗಿಳಿಸುವಲ್ಲಿ ಯಶಸ್ವಿಯಾಗಿದರು.


ಮೂಲತಃ ಕೇರಳದವರಾದ ಮಹಿಳೆ ದೊಡ್ಡಕಮ್ಮನಹಳ್ಳಿಯ ಐದು ಅಂತಸ್ತಿನ ಕಟ್ಟಡದ ನಾಲ್ಕನೇ ಮಹಡಿಯ ಬಾಡಿಗೆ ಮನೆಯಲ್ಲಿ ಮಗನೊಂದಿಗೆ ವಾಸವಾಗಿದ್ದರು.

ಮಧ್ಯಾಹ್ನ ಸುಮಾರು 12.30ರ ವೇಳೆಗೆ ತಮ್ಮ ಮಗನನ್ನು ಕರೆದುಕೊಂಡು ಕಟ್ಟಡದ ಮೇಲ್ಭಾವಣಿಗೆ ತೆರಳಿ ಅಲ್ಲಿಂದ ಜಿಗಿದು ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಬೆದರಿಕೆ ಹಾಕಿದ್ದಾರೆ.

ಕಟ್ಟಡದ ಅಂಚಿನಲ್ಲಿ ಮಗನೊಂದಿಗೆ ನಿಂತಿದ್ದ ಮಹಿಳೆಯನ್ನು ಗಮನಿಸಿದ ಸ್ಥಳೀಯ ನಿವಾಸಿಗಳು ಕೂಡಲೇ ನಮ್ಮ 112 ತುರ್ತು ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಿದ್ದಾರೆ.

ಮಾಹಿತಿ ಪಡೆದ ಹುಳಿಮಾವು ಪೊಲೀಸರು, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಿಬ್ಬಂದಿ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪಡೆ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ಆರಂಭಿಸಿದರು.

ಸ್ಥಳಕ್ಕೆ ಆಗಮಿಸಿದ ಹುಳಿಮಾವು ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಜಗದೀಶ್ ಆರ್. ಹಾಗೂ ಅಗ್ನಿಶಾಮಕ ಸಿಬ್ಬಂದಿ ಮಹಿಳೆಯೊಂದಿಗೆ ಮಾತುಕತೆ ನಡೆಸಲು ಪ್ರಯತ್ನಿಸಿದರು. ಆದರೆ, ತಮ್ಮ ಹಲವು ವರ್ಷಗಳ ವೈಯಕ್ತಿಕ ಸಮಸ್ಯೆಗಳನ್ನು ಬಗೆಹರಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸ್ಥಳಕ್ಕೆ ಬರಬೇಕು ಎಂದು ಮಹಿಳೆ ಪಟ್ಟು ಹಿಡಿದಿದ್ದರು.



1 ಮಾಹಿತಿ ಪಡೆದ ಹುಳಿಮಾವು ಪೊಲೀಸರು

2 ಸ್ಥಳಕ್ಕೆ ಆಗಮಿಸಿದ ಹುಳಿಮಾವು ಪೊಲೀಸ್

3 ಮಹಿಳೆಯ ಗೌರವಕ್ಕೆ ಧಕ್ಕೆ ತರುವಿಕೆ

ಘಟನೆಯ ನಿಖರ ಕಾರಣವನ್ನು ಮಹಿಳೆ ಪೊಲೀಸರಿಗೆ ತಿಳಿಸಿಲ್ಲ. ಆದರೆ, ಪ್ರಾಥಮಿಕ ಮಾಹಿತಿ ಪ್ರಕಾರ ಅವರು ಈ ಹಿಂದೆ ಹಲವು ಪ್ರಕರಣಗಳನ್ನು ದಾಖಲಿಸಿದ್ದಾರೆಂದು ತಿಳಿದುಬಂದಿದೆ. ಪತಿಯಿಂದ ಪ್ರತ್ಯೇಕವಾಗಿ ವಾಸಿಸುತ್ತಿದ್ದ ಮಹಿಳೆ ತಮ್ಮ ನಾಲ್ಕು ವರ್ಷದ ಮಗನೊಂದಿಗೆ ಬಾಡಿಗೆ ಮನೆಯಲ್ಲಿ ನೆಲೆಸಿದ್ದರು ಎಂದು ತಿಳಿಸಿದ್ದಾರೆ.-ಪೊಲೀಸರು

### ಮಹಿಳೆಯ ಗೌರವಕ್ಕೆ ಧಕ್ಕೆ

ಪ್ರಾಥಮಿಕ ತನಿಖೆಯಲ್ಲಿ ಮಹಿಳೆ ತನ್ನನ್ನು ವ್ಯಕ್ತಿಯೊಬ್ಬ ಮೋಸ ಮಾಡಿದ್ದಾನೆ ಎಂದು ಆರೋಪಿಸಿದ್ದಾರೆ. ಈ ಸಂಬಂಧ ನೀಡಿದ ದೂರಿನ ಆಧಾರದ ಮೇಲೆ ಹುಳಿಮಾವು ಪೊಲೀಸರು ಆ ವ್ಯಕ್ತಿಯ ವಿರುದ್ಧ ಮಹಿಳೆಯ ಗೌರವಕ್ಕೆ ಧಕ್ಕೆ ತರುವಿಕೆ ಸೇರಿದಂತೆ ವಿವಿಧ ಕಾನೂನು ವಿಧಿಗಳಡಿ ಪ್ರಕರಣ ದಾಖಲಿಸಿದ್ದಾರೆ.

ಪೊಲೀಸರು ಸುಮಾರು ಎರಡು ಗಂಟೆಗಳ ಕಾಲ ನಿರಂತರವಾಗಿ ಮಹಿಳೆಯೊಂದಿಗೆ ಸಮಾಲೋಚನೆ ನಡೆಸಿ, ಮಗುವಿನ ಸುರಕ್ಷತೆಯನ್ನು ಮನವರಿಕೆ ಮಾಡಿಕೊಟ್ಟರು. ಕೊನೆಗೆ ಸಮಾಧಾನಗೊಂಡ ಮಹಿಳೆ ಕಟ್ಟಡದ ಅಂಚಿನಿಂದ ಹಿಂದೆ ಸರಿದರು. ಬಳಿಕ ಅಧಿಕಾರಿಗಳು ಆಕೆಯನ್ನು ಹಾಗೂ ಮಗುವನ್ನು ಸುರಕ್ಷಿತವಾಗಿ ಕೆಳಗೆ ಕರೆತಂದರು.

ಮಹಿಳೆಗೆ ಮಾನಸಿಕ ಸಮಾಲೋಚನೆ (ಕೌನ್ಸೆಲಿಂಗ್) ವ್ಯವಸ್ಥೆ ಮಾಡಲಾಗುವುದು ಎಂದು ಪೊಲೀಸರು ತಿಳಿಸಿದ್ದು, ಪ್ರಕರಣದ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಈ ಘಟನೆ ಕೆಲಕಾಲ ಪ್ರದೇಶದಲ್ಲಿ ಆತಂಕದ ವಾತಾವರಣ ಸೃಷ್ಟಿಸಿದ್ದು, ಸಮಯೋಚಿತವಾಗಿ ಕಾರ್ಯಾಚರಣೆ ನಡೆಸಿದ ಪೊಲೀಸರು ಮತ್ತು ರಕ್ಷಣಾ ಸಿಬ್ಬಂದಿಯ ಪ್ರಯತ್ನದಿಂದ ಸಂಭವಿಸಬಹುದಾಗಿದ್ದ ದುರಂತ ತಪ್ಪಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಅಶಕ್ತ ದೇಹ ಮನಸ್ಸನ್ನು ದುರ್ಬಲಗೊಳಿಸುವುದರಿಂದ ನಿಮ್ಮ ಶಕ್ತಿಯನ್ನು ಮರಳಿ ಪಡೆಯಲು ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳಿ. ಸಾಮರ್ಥ್ಯದ ಕೊರತೆಯಿರದೇ ಇಚ್ಛಾಶಕ್ತಿಯ ಕೊರತೆಯಿದೆಯೆಂದು ನೀವು ಅರ್ಥಮಾಡಿಕೊಳ್ಳಬೇಕು. ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.

**ವೃಷಭ** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ನಿಮ್ಮ ಸಹೋದರ-ಸಹೋದರಿಯರಲ್ಲಿ ಒಬ್ಬರು ಇಂದು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು, ನೀವು ಅವರಿಗೆ ಹಣವನ್ನು ಸಾಲವಾಗಿ ಕೊಡುತ್ತೀರಿ ಆದರೆ ಇದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು.

**ಮಿಥುನ** ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ನಿಮ್ಮ ಕುಟುಂಬದ ಸದಸ್ಯರ ಭಾವನೆಗಳನ್ನು ನೋಯಿಸುವುದನ್ನು ತಪ್ಪಿಸುವ ಮೂಲಕ ನಿಮ್ಮ ಕೋಪವನ್ನು ನಿಯಂತ್ರಿಸಿ.

**ಕರ್ಕಾಟಕ** ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಇಂದು ಹೂಡಿಕೆಗಳನ್ನು ಮಾಡಬಾರದು. ವೈಯಕ್ತಿಕ ವಿಷಯಗಳನ್ನು ಬಗೆಹರಿಸುವಲ್ಲಿ ಉದಾರತೆ ತೋರಿ, ಆದರೆ ನಿಮ್ಮನ್ನು ಪ್ರೀತಿಸುವ ಮತ್ತು ಕಾಳಜಿ ತೋರುವವರನ್ನು ನೋಯಿಸದಿರಲು ನಿಮ್ಮ ಭಾಷೆಯ ಬಗ್ಗೆ ಎಚ್ಚರ ವಹಿಸಿ.

**ಸಿಂಹ** ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ದುಂದುಗಾರಿಕೆ ಮತ್ತು ಸಂಶಯಾಸ್ಪದವಾದ ಹಣಕಾಸು ಯೋಜನೆಗಳನ್ನು ತಪ್ಪಿಸಿ. ಸಂಬಂಧಿಗಳು ನಿಮ್ಮ ಅತೀ ಉದಾರ ವರ್ತನೆಯ ಅನುಚಿತ ಲಾಭ ಪಡೆಯಲು ಪ್ರಯತ್ನಿಸುತ್ತಾರೆ. ನಿಮ್ಮನ್ನು ನಿಯಂತ್ರಿಸಕೊಳ್ಳದಿದ್ದರೆ ನೀವು ಮೋಸಹೋಗಬಹುದು.

**ಕನ್ಯಾ** ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು. ನಿಮ್ಮ ಸಾಮಾಜಿಕ ಜೀವನವನ್ನು ನಿರ್ಲಕ್ಷಿಸಬೇಡಿ.

**ತುಲಾ** ನಿಮ್ಮ ಇತರರನ್ನು ಶ್ಲಾಘಿಸುವ ಮೂಲಕ ಅವರ ಯಶಸ್ಸನ್ನು ಆನಂದಿಸುವ ಸಾಧ್ಯತೆಗಳಿವೆ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು. ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು.

**ವೃಶ್ಚಿಕ** ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸೆಗಳನ್ನು ದೂರ ಮಾಡಬಹುದು. ಇತರರಿಗೆ ಪ್ರತಿಫಲಗಳು ತರುವ ನಿಮ್ಮ ಸಾಮರ್ಥ್ಯ ಪ್ರತಿಫಲ ತರುತ್ತದೆ.

**ಧನಸ್ಸು** ಚಾಲನೆ ಮಾಡುವಾಗ ಎಚ್ಚರ ವಹಿಸಿ. ನೀವು ಇತರರ ಮೇಲೆ ಹೆಚ್ಚು ಖರ್ಚು ಮಾಡಬಯಸುತ್ತೀರಿ. ದಿನದಲ್ಲಿ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷ ಮತ್ತು ಆನಂದ ತೆರೆದಿಡುತ್ತದೆ. ಪ್ರೀತಿ ದೇವರ ಪೂಜೆಗೆ ಪರ್ಯಾಯವಾಗಿದೆ; ಇದು ಅತ್ಯಂತ ಆಧ್ಯಾತ್ಮಿಕವೂ ಹಾಗೂ ಧಾರ್ಮಿಕವೂ ಆಗಿದೆ.

**ಮಕರ** ನೀವು ಇತರರ ಮೇಲೆ ಹೆಚ್ಚು ಖರ್ಚು ಮಾಡಬಯಸುತ್ತೀರಿ. ಇತರರಿಗೆ ಮುಜುಗರ ಉಂಟುಮಾಡಬೇಡಿ ಮತ್ತು ನಿಮ್ಮ ಕುಟುಂಬದ ಅವಶ್ಯಕತೆಗಳಿಗೆ ಹೊಂದಿಕೊಳ್ಳಲು ಪ್ರಯತ್ನಿಸಿ. ಇತರರ ಹಸ್ತಕ್ಷೇಪ ವ್ಯಾಜ್ಯವುಂಟುಮಾಡುತ್ತದೆ. ಇಂದು ನಿಮ್ಮ ಕೆಲಸದಲ್ಲಿ ನಿಮ್ಮ ಉತ್ತಮ ಕಾರ್ಯಗಳಿಗಾಗಿ ನಿಮ್ಮನ್ನು ಸನ್ಮಾನಿಸಲಾಗುವುದು.

**ಕುಂಭ** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ದುಂದುಗಾರಿಕೆ ಮತ್ತು ಸಂಶಯಾಸ್ಪದವಾದ ಹಣಕಾಸು ಯೋಜನೆಗಳನ್ನು ತಪ್ಪಿಸಿ. ಯುವಕರು ಶಾಲಾ ಯೋಜನೆಗಳಲ್ಲಿ ಕೆಲವು ಸಲಹೆ ಪಡೆಯಬಹುದು. ನಿಮ್ಮ ಪ್ರೀತಿ ಸಂಗಾತಿ ಪ್ರೀತಿಯ ಸಾಗರದಲ್ಲಿ ತೇಲುತ್ತೀರಿ ಪ್ರೀತಿಯ ಔನ್ನತ್ಯವನ್ನು ಅನುಭವಿಸುತ್ತೀರಿ.

**ಮೀನ** ಹೊಟ್ಟೆ ಹಾಳಾಗುವಿಕೆ ನಿಮಗೆ ಕೆಲವು ಸಮಸ್ಯೆಗಳನ್ನು ತರಬಹುದು. ತಕ್ಷಣ ಪರಿಹಾರ ಪಡೆಯಲು ವೈದ್ಯರ ಸಲಹೆ ಪಡೆಯಿರಿ. ತಮ್ಮ ಆಪ್ತರು ಅಥವಾ ಸಂಬಂಧಿಕರೊಂದಿಗೆ ಸೇರಿ ವ್ಯಾಪಾರವನ್ನು ಮಾಡುತ್ತಿರುವ ಜನರು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹೆಜ್ಜೆಯನ್ನು ಹಾಕುವ ಅಗತ್ಯವಿದೆ

# ಸರ್ಕಾರಿ ಶಾಲೆಯ ಗೇಟ್ ಕುಸಿದು ಬಿದ್ದು, ನಾಲ್ವರು ವಿದ್ಯಾರ್ಥಿಗಳಿಗೆ ಗಾಯ!

• **ಉದಯವಾಹಿನಿ ಬಲಕುಂದಿ:**

ಸರ್ಕಾರಿ ಶಾಲೆಯ ಮುಖ್ಯದ್ವಾರದ ಗೇಟ್ ಬಿದ್ದು ನಾಲ್ವರು ವಿದ್ಯಾರ್ಥಿಗಳು ತೀವ್ರವಾಗಿ ಗಾಯಗೊಂಡಿರುವ ಘಟನೆ ಇಳಕಲ್ ತಾಲ್ಲೂಕಿನ ಬಲಕುಂದಿ ಗ್ರಾಮದಲ್ಲಿ ನಡೆದಿದೆ. ಗಾಯಗೊಂಡ ನಾಲ್ವರು ವಿದ್ಯಾರ್ಥಿಗಳ ಪೈಕಿ ಓರ್ವ ವಿದ್ಯಾರ್ಥಿನಿಯನ್ನು ನಯನಾ ಕುಮಾರಿ ಎಂದು ಗುರುತಿಸಲಾಗಿದೆ.

ಆಕೆಯ ಮೇಲೆ ಶಾಲೆಯ ಮುಖ್ಯ ದ್ವಾರದ ಗೇಟ್ ಕುಸಿದು ಬಿದ್ದ ನಂತರ ತೀವ್ರವಾಗಿ ಗಾಯಗೊಂಡಿದ್ದಾಳೆ. ಬಾಲಕಿ ಮೂಗಿಗೆ ಬಲವಾದ ಪೆಟ್ಟು ಬಿದ್ದಿದ್ದು, ಕಿವಿಯಿಂದಲೂ ರಕ್ತಸ್ರಾವವಾಗಿದೆ ಎಂದು ತಿಳಿದು ಬಂದಿದೆ.

ಆಕೆಯನ್ನು ಮೊದಲಿಗೆ ಇಳಕಲ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಬಾಗಲಕೋಟೆಯ ಖಾಸಗಿ ಆಸ್ಪತ್ರೆಗೆ ಕರೆತರಲಾಯಿತು. ಇತರ ವಿದ್ಯಾರ್ಥಿಗಳು ಇಳಕಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

15 ದಿನಗಳ ಹಿಂದಷ್ಟೇ ಗೇಟ್ ಬಿದ್ದಾಗಲೂ ಅಪಾಯ ತಪ್ಪಿತ್ತು. ಕಳಪೆ ಕಾಮಗಾರಿಯೇ ಘಟನೆಗೆ ಕಾರಣ ಎಂದು ಗ್ರಾಮಸ್ಥರು ದೂರುತ್ತಿದ್ದಾರೆ. ಗೇಟ್ ನ ಬಗ್ಗೆ ಪದೇ ಪದೇ ದೂರು ಸಲ್ಲಿಸಿದರೂ ಶಾಲಾ ಆಡಳಿತ ಮಂಡಳಿ ಯಾವುದೇ ಕ್ರಮ ಕೈಗೊಳ್ಳಲಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

# ಯುವಕನ ಬರ್ಬರ ಹತ್ಯೆ

• **ಉದಯವಾಹಿನಿ ವಿಜಯಪುರ,**

ನಗರದ ಚಪ್ಪರಬಂದ್ ಗಲ್ಲಿಯಲ್ಲಿ 36 ವರ್ಷದ ಯುವಕನನ್ನು ದುಷ್ಕರ್ಮಿಗಳು ಬರ್ಬರವಾಗಿ ಹತ್ಯೆಗೈದಿರುವ ಘಟನೆ ಬೆಳಕಿಗೆ ಬಂದಿದೆ.ಮೃತನನ್ನು ಉಮರಸಾಬ್ ಪಟೇಲ್ (36) ಎಂದು ಗುರುತಿಸಲಾಗಿದೆ.

ಆರೋಪಿಗಳು ಕಬ್ಬಿಣದ ರಾಡ್ ಹಾಗೂ ಸ್ಕ್ರೂ (ಚೂಪಾದ ಕಬ್ಬಿಣದ ವಸ್ತು) ಬಳಸಿ ತಲೆಗೆ ಮಾರಣಾಂತಿಕವಾಗಿ ಹಲ್ಲೆ ನಡೆಸಿ ಕೊಲೆ ಮಾಡಿರುವುದಾಗಿ ಪ್ರಾಥಮಿಕ ಮಾಹಿತಿ ತಿಳಿಸಿದೆ.

ಉಮರಸಾಬ್ ಶನಿವಾರ ರಾತ್ರಿ ತನ್ನ ಕೆಲ ಗೆಳೆಯರೊಂದಿಗೆ ಪಾರ್ಟಿಯಲ್ಲಿ ಭಾಗವಹಿಸಿದ್ದ ಎನ್ನಲಾಗಿದೆ. ಇದೇ ವೇಳೆ ಪರಸ್ಪರ ಮಾತಿನ ಚಕಮಕಿ ನಡೆದು ಜಗಳಕ್ಕೆ ತಿರುಗಿದ್ದು, ಆ ಜಗಳವೇ ಹತ್ಯೆಗೆ ಕಾರಣವಾಗಿರಬಹುದೆಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ. ಘಟನೆ ಬಳಿಕ ಆರೋಪಿಗಳು ಪರಾರಿಯಾಗಿದ್ದಾರೆ ಎನ್ನಲಾಗಿದೆ. ಸುದ್ದಿ ತಿಳಿಯುತ್ತಿದ್ದಂತೆಯೇ ಗೋಲಗುಂಬಜ್ ಪೊಲೀಸ್ ಠಾಣೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ. ಹತ್ಯೆಗೆ ನಿಖರ ಕಾರಣ ಏನು ಎಂಬುದು ತನಿಖೆಯ ನಂತರವೇ ಸ್ಪಷ್ಟವಾಗಬೇಕಿದೆ.

# ಪೊಲೀಸರಿಂದ ಮೂವರು ಅಂತರರಾಜ್ಯ ಕಳ್ಳರ ಬಂಧನ

• **ಉದಯವಾಹಿನಿ ಅಫಜಲಪುರ,**

ದೇವಲ ಗಾಣಗಾಪುರ ಪೊಲೀಸ್‌ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ 2 ಪ್ರತ್ಯೇಕ ಸರಗಳ್ಳತನ ಪ್ರಕರಣಗಳನ್ನು ಪೊಲೀಸರು ಬೇಧಿಸಿದ್ದು, ಮೂವರು ಅಂತರರಾಜ್ಯ ಕಳ್ಳರನ್ನು ಬಂಧಿಸಿ 40 ಗ್ರಾಂ ಬಂಗಾರದ ಆಭರಣಗಳನ್ನು ವಶಪಡಿಸಿಕೊಂಡಿದ್ದಾರೆ. ಸೋಲಾಪುರ ರಸ್ತೆಯ ಜೋಪಡಿ ಪಟ್ಟಿ ನಿವಾಸಿಗಳಾದ ಭಗತ್ ಸಿಂಗ್ ಅಶೋಕ ಸಾಳುಂಕೆ, ಬಾದಲ್ ಅಶೋಕ ಸಾಳುಂಕೆ ಹಾಗೂ ಅಭಿಮನ್ಯು ಅರ್ಜುನ ಡಾಂಗೆಯನ್ನು ಬಂಧಿಸಲಾಗಿದೆ ಎಂದು ಪೊಲೀಸ್ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

2025ರ ನವೆಂಬರ್ 5 ರಂದು ದೇವಲಗಾಣಗಾಪುರ ಬಸ್ ನಿಲ್ದಾಣದಲ್ಲಿ ಅಶ್ವಿನಿ ಎಂಬ ಮಹಿಳೆಯ 20 ಗ್ರಾಂ ತೂಕದ ಬಂಗಾರದ ತಾಳಿ ಸರ ಕಳ್ಳತನವಾಗಿತ್ತು. 2026ರ ಫೆಬ್ರವರಿ 16 ರಂದು ದೇವಲ ಗಾಣಗಾಪುರ ಗ್ರಾಮದ ಸಂಗಮದ ಭೀಮಾನದಿ ದಂಡೆಯ ಮೇಲೆ ಕಲ್ಯಾಣಕ್ಕೆ ಬಂದಿದ್ದ ಕಲಾವತಿ ಎಂಬುವವರ 20 ಗ್ರಾಂ ಚಿನ್ನದ ತಾಳಿ ಸರ, 10 ಗ್ರಾಂ ತಾಳೆಗುಂಡು ಹಾಗೂ 10 ಗ್ರಾಂ ಜೋರಮಾಳ ಸೇರಿ ಒಟ್ಟು 40 ಗ್ರಾಂ ಚಿನ್ನಾಭರಣವನ್ನು ಕಳ್ಳರು ದೋಚಿ ಪರಾರಿಯಾಗಿದ್ದರು.

# ಹಾವೇರಿ ಜಿಲ್ಲೆಯ ಮೋಡ ಬಿತ್ತನೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಚಾಲನೆ!

## ಹಾವೇರಿ ಜಿಲ್ಲೆಯ ಎಲ್ಲಾ ಶಾಸಕರು ತಮ್ಮ ಸ್ವಂತ ಖರ್ಚಿನಲ್ಲಿ ಈ ಕಾರ್ಯ ಕೈಗೊಂಡಿದ್ದಾರೆ

• **ಉದಯವಾಹಿನಿ ಹುಬ್ಬಳ್ಳಿ:**

ರಾಜ್ಯದಲ್ಲಿ ಬರಗಾಲದ ಛಾಯೆ ಆವರಿಸಿದೆ. ರೈತರು ಮಳೆಗಾಗಿ ಪ್ರಾರ್ಥನೆ ಮಾಡಿದರೂ ಕೂಡ ಮಳೆಯಾಗದ ಕಾರಣ ಶಾಸಕ ಪ್ರಕಾಶ್ ಕೋಳಿವಾಡ ನೇತೃತ್ವದಲ್ಲಿ ಹಾವೇರಿ ಜಿಲ್ಲೆಯ ಶಾಸಕರು ಮೋಡ ಬಿತ್ತನೆ ಕಾರ್ಯ ಆರಂಭಿಸಿದ್ದಾರೆ.

**1 : ಯಾಕೆ ಸರ್ಕಾರ ವಿಳಂಬ ಮಾಡುತ್ತಿದೆ**
**2 : ಕೂಡಲೇ ಮೋಡ ಬಿತ್ತನೆ ಮಾಡಬೇಕು**
**3 : ಒಂದು ತಾಸಿಗೆ 15 ಲಕ್ಷ ರೂ. ಖರ್ಚಾಗಲಿದೆ.**




ಉದಯವಾಹಿನಿ ಚಿತ್ರ

ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಸಚಿವ ಸತೀಶ್ ಜಾರಕಿಹೊಳಿ ಮತ್ತು ಮಾಜಿ ಸಚಿವ ಹೆಚ್. ಕೆ. ಪಾಟೀಲ್ ಅವರು ಮೋಡ ಬಿತ್ತನೆಯ ವಿಶೇಷ ವಿಮಾನಗಳಿಗೆ ಸೋಮವಾರ ಚಾಲನೆ ನೀಡಿದರು. ಇಂದಿನಿಂದ ವಿಶೇಷ ವಿಮಾನಗಳು ಹಾವೇರಿ ಜಿಲ್ಲೆಯಲ್ಲಿ ಮೋಡ ಬಿತ್ತನೆ ಮಾಡುತ್ತಿವೆ.

ಹಾವೇರಿ ಜಿಲ್ಲೆಯ ಎಲ್ಲಾ ಶಾಸಕರು ತಮ್ಮ ಸ್ವಂತ ಖರ್ಚಿನಲ್ಲಿ ಈ ಕಾರ್ಯ ಕೈಗೊಂಡಿದ್ದಾರೆ. ಒಂದು ತಾಸಿಗೆ 15 ಲಕ್ಷ ರೂ. ಖರ್ಚಾಗಲಿದೆ. ಒಟ್ಟು ಮೂರು ದಿನ ಮೋಡ ಬಿತ್ತನೆಗೆ ಪ್ಲಾನ್ ಮಾಡಲಾಗಿದೆ.

ಇದೇ ವೇಳೆ ಮಾತನಾಡಿದ ಮಾಜಿ ಸಚಿವ ಹೆಚ್.ಕೆ. ಪಾಟೀಲ್, ಉತ್ತರ ಕರ್ನಾಟಕದಲ್ಲಿ ಸರ್ಕಾರ ಕೂಡಲೇ ಮೋಡ ಬಿತ್ತನೆ ಮಾಡಬೇಕು. ಸರ್ಕಾರ ಕೂಡಾ ಈ ದಿಸೆಯಲ್ಲಿ ಪ್ರಯತ್ನ ಮಾಡಬೇಕು. ಉತ್ತರ ಕರ್ನಾಟಕ ಶಾಸಕರ ಪರವಾಗಿ ಮನವಿ ಮಾಡುತ್ತಿದ್ದೇನೆ. ಯಾಕೆ ಸರ್ಕಾರ ವಿಳಂಬ ಮಾಡುತ್ತಿದೆ?. ಅಧಿಕಾರಿಗಳ ಮಾತು ಕೇಳಿ ಹಿಂದೇಟು ಹಾಕಬಾರದು. ನೀವು ಅಧಿಕಾರಿಗಳ ಮಾತು ಕೇಳಬೇಡಿ, ವಿಜ್ಞಾನಿಗಳ ಮಾತು ಕೇಳಿ. ಸದ್ಯ ಮೋಡಗಳು ಇವೆ. ಕೂಡಲೇ ಮೋಡ ಬಿತ್ತನೆ ಆರಂಭಿಸಬೇಕು. ಈ ಬಗ್ಗೆ ಸಿಎಂ ಭೇಟಿ ಮಾಡೋದಾದರೂ ಮಾಡುತ್ತೇವೆ. ಕೇಂದ್ರ ಸರ್ಕಾರ ಕೂಡ ಈ ಬಗ್ಗೆ ಗಂಭೀರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

> ಮೋಡ ಬಿತ್ತನೆ ವಿಮಾನ ಈ ತಿಂಗಳು ಹುಬ್ಬಳ್ಳಿಯಲ್ಲಿ ಇರುತ್ತದೆ. ತೇವಾಂಶ ಇರುವ ಮೋಡುಗಳು ಇದ್ದಾಗ ಮೋಡ ಬಿತ್ತನೆ ಮಾಡಲಾಗುತ್ತದೆ. ಸದ್ಯ ಮೂರು ದಿನಗಳ ಕಾಲ ಮಾಡುತ್ತೇವೆ. ಹಾವೇರಿ ಜಿಲ್ಲೆಯ ಶಾಸಕರು ಪ್ರಯತ್ನ ಮಾಡಿದ್ದೇವೆ. ಒಂದು ಗಂಟೆಗೆ 15 ಲಕ್ಷ ಖರ್ಚು ಬರುತ್ತದೆ ಎಂದು ತಿಳಿಸಿದರು.
> -ಶಾಸಕ ಪ್ರಕಾಶ್ ಕೋಳಿವಾಡ

> ಧಾರವಾಡ ಜಿಲ್ಲೆಯಲ್ಲಿ ಮೋಡ ಬಿತ್ತನೆ ಮಾಡಬೇಕು. ಈ ಬಗ್ಗೆ ಸಿಎಂಗೆ ಮನವಿ ಮಾಡಿದ್ದೇವೆ. ಧಾರವಾಡ ಜಿಲ್ಲೆಯ ಶಾಸಕರು ಆಗ್ರಹಿಸಿದ್ದೇವೆ. ರೈತರ ನೆರವಿಗೆ ಹೋಗಲು ಧಾರವಾಡ ಜಿಲ್ಲೆಯ ಶಾಸಕರು ಸಿದ್ಧರಿದ್ದೇವೆ. ಸರ್ಕಾರ ಮಾಡದೇ ಇದ್ದರೆ ವೈಯಕ್ತಿಕವಾಗಿ ಮಾಡುತ್ತೇವೆ. ಮೋಡ ಬಿತ್ತನೆಯಿಂದ ನೂರಕ್ಕೆ ನೂರು ಮಳೆಯಾಗುತ್ತದೆ ಎಂದರು.
> -ಶಾಸಕ ಎನ್. ಹೆಚ್. ಕೋನರೆಡ್ಡಿ

ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿ, ಹಾವೇರಿಯಲ್ಲಿ ಮೋಡ ಬಿತ್ತನೆಗೆ ಚಾಲನೆ ನೀಡಲಾಗಿದೆ. ಮೋಡ ಬಿತ್ತನೆ ಬಗ್ಗೆ ನಾನು ಕೂಡಾ ಸಿಎಂ ಗಮನಕ್ಕೆ ತರುತ್ತೇನೆ. ಮೋಡ ಬಿತ್ತನೆ ಸರ್ಕಾರಿ ಕಾರ್ಯಕ್ರಮವಾಗಬೇಕು. ಈ ಬಗ್ಗೆ ಸಿಎಂಗೆ ಆಗ್ರಹ ಮಾಡುತ್ತೇವೆ. ಮೋಡವಿದ್ದಾಗಲೇ ಮೋಡ ಬಿತ್ತನೆ ಮಾಡಬೇಕು. ಹೀಗಾಗಿ ಮೋಡ ಬಿತ್ತನೆ ತಡವಾಗಿದೆ. ಇನ್ನು ಮುಂದೆ ನಮ್ಮ ಜಿಲ್ಲೆಯಲ್ಲೂ ಮೋಡ ಬಿತ್ತನೆ ಬಗ್ಗೆ ಚಿಂತನೆ ಮಾಡಲಾಗುವುದು ಎಂದು ಹೇಳಿದರು.

# ತೊಗರಿ ಬಿತ್ತನೆ ವೇಳೆ ಮಣ್ಣಿನ ತೇವಾಂಶ ಮುಖ್ಯ

• **ಉದಯವಾಹಿನಿ ಕಲಬುರಗಿ,:**

ತೊಗರಿ ಬಿತ್ತನೆ ಕೈಗೊಳ್ಳುವ ವೇಳೆ ಮಣ್ಣಿನಲ್ಲಿ ತೇವಾಂಶ ಇರುವುದು ಅತಿ ಮುಖ್ಯ ಎಂದು ಕೃಷಿ ವಿಜ್ಞಾನ ಕೇಂದ್ರದ ಕೃಷಿ ವಿಜ್ಞಾನಿ ಡಾ.ಜಹೀರ್ ಹೇಳಿದರು. ತಾಲ್ಲೂಕಿನ ಹೊನ್ನಕಿರಣಗಿ ಗ್ರಾಮದಲ್ಲಿ ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಕೃಷಿ ವಿಜ್ಞಾನ ಕೇಂದ್ರ ಸಂಯುಕ್ತ ಆಶ್ರಯದಲ್ಲಿ ಮುಂಗಾರು ಹಂಗಾಮು ಬೆಳೆ ಬಿತ್ತನೆ ಕುರಿತು ರೈತರಿಗಾಗಿ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು. ಕಡಿಮೆ ಮಳೆ, ಮುಂಗಾರು ಮಳೆಯ ವಿಳಂಬ ಒಂದೆಡೆಯಾದರೆ ಎಲ್ಲೆಡೆ ಒಂದೇ ಪ್ರಮಾಣದ ಮಳೆ ಸುರಿಯುತ್ತಿಲ್ಲ. ಹೀಗಾಗಿ ಮಣ್ಣಿನ ತೇವಾಂಶದಲ್ಲಿ ವ್ಯತ್ಯಾಸ ಕಾಣಬಹುದಾಗಿದೆ. ತೇವಾಂಶ ಸಮಸ್ಯೆಯಿಂದಾಗಿ ಹೆಸರು, ಉದ್ದು ಬೆಳೆಯುವ ರೈತರು ತೊಂದರೆ ಅನುಭವಿಸುವಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.ಕಲಬುರಗಿ ಜಿಲ್ಲೆಯ ಕೆಲವು ಭಾಗಗಳಲ್ಲಿ ವಾರಕ್ಕೆ ಐದು ನಿಮಿಷ ಮಳೆಯಾಗುತ್ತಿದೆ. ಬಿತ್ತಿದ ಬೆಳೆಗೆ ಭೂಮಿ ತೇವಾಂಶ ಕಾಪಾಡಿಕೊಳ್ಳಲು ಆಗುತ್ತಿಲ್ಲ.

ಮತ್ತೊಂದೆಡೆ, ಪ್ರತಿ ತಾಸಿಗೆ 24 ರಿಂದ 30 ಕಿಲೋಮೀಟರ್ ವೇಗದ ಗಾಳಿ ಬೀಸುತ್ತಿರುವ ಹಿನ್ನೆಲೆಯಲ್ಲಿ ಮೋಡಗಳು ಒಂದೆಡೆ ನಿಲ್ಲಲು ಸಹ ಆಗುತ್ತಿಲ್ಲ. ಇದರಿಂದಾಗಿ ಮಳೆಯ ಕೊರತೆ ಕಾಡುತ್ತಿದೆ ಎಂದರು.ಪ್ರಸಕ್ತ ವರ್ಷ ಯುರೋಪ್, ಏಷ್ಯಾ, ಭಾರತದಲ್ಲಿ ಹವಾಮಾನ ವೈಪರೀತ್ಯ, ಮಾನವ, ಪ್ರಾಣಿ ಸಂಕುಲ ಹಾಗೂ ಕೃಷಿ ಬೆಳೆಗೆ ಧಕ್ಕೆ ನೀಡುತ್ತಿದೆ ಎಂದರು.ತೊಗರಿ ಬೀಜ ಉಪಚಾರ, ಬೀಜ ಕ್ಯಾಲ್ಸಿಯಂ ಮೂಲಕ ಕಠಿಣಗೊಳಿಸುವಿಕೆ, ಕಸ್ಕೂಟ ಕಳೆ ನಿರ್ವಹಣೆ, ಕಡಿಮೆ ಅವಧಿ ತಳಿ ಉಪಯೋಗ, ಬರಗಾಲದಲ್ಲಿ ಬೆಳೆ ನಿರ್ವಹಣೆ, ಬೋದು ಪದ್ಧತಿ ತೊಗರಿ ಬೇಸಾಯ, ಸಸ್ಯ ಸಂರಕ್ಷಣೆ ಮಾಹಿತಿ, ಕೃಷಿ ಇಲಾಖೆ ಯೋಜನೆ, ಸಮಗ್ರ ಕೃಷಿ ಮಾಹಿತಿಯನ್ನು ನಿವೃತ್ತ ಕೃಷಿ ವಿಜ್ಞಾನಿ ಡಾ. ದಯಾನಂದ ಮಹಾಲಿಂಗ, ವಿವರಿಸಿದರು.



ಉದಯವಾಹಿನಿ ಚಿತ್ರ

# ಕಾಂಗ್ರೆಸ್ ಸರ್ಕಾರದ ರೈತ ವಿರೋಧಿ ನಿರ್ಧಾರ ಖಂಡನೀಯ

• **ಉದಯವಾಹಿನಿ ಕಲಬುರಗಿ**

ರಾಜ್ಯದ ರೈತರ ಬದುಕಿಗೆ ಮತ್ತೊಂದು ದೊಡ್ಡ ಹೊಡೆತ ನೀಡುವ ರೀತಿಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಕೈಗೊಂಡಿರುವ ಬೆಳೆಯನ್ನೇ ಬೆಳೆಯಬೇಡಿ ಪರಿಹಾರವನ್ನೇ ಕೇಳಬೇಡಿ ಎಂಬ ಕ್ಯಾಬಿನೆಟ್ ನಿರ್ಧಾರ ಅತ್ಯಂತ ನಿರ್ಲಜ್ಜ, ರೈತ ವಿರೋಧಿ ಹಾಗೂ ಅಮಾನವೀಯವಾಗಿದೆ ಎಂದು ಮಹಾಗಾಂವ ಬಿಜೆಪಿ ಮುಖಂಡ ಮಲ್ಲಿಕಾರ್ಜುನ ಮರತೂರಕರ್ ಕಟುವಾಗಿ ಟೀಕಿಸಿದ್ದಾರೆ.



ಉದಯವಾಹಿನಿ ಚಿತ್ರ

ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು,ಪ್ರಕೃತಿಯ ಮೇಲೆ ಅವಲಂಬಿತವಾಗಿರುವ ರೈತರು ಮಳೆ ಕೊರತೆ, ಅತಿವೃಷ್ಟಿ, ಬೆಲೆ ಕುಸಿತ ಮತ್ತು ಸಾಲದ ಹೊರೆಗಳಿಂದ ಈಗಾಗಲೇ ತತ್ತರಿಸಿದ್ದಾರೆ. ಇಂತಹ ಸಂದರ್ಭದಲ್ಲಿ ಸರ್ಕಾರ ರೈತರ ಬೆನ್ನಿಗೆ ನಿಲ್ಲುವುದನ್ನು ಬಿಟ್ಟು ರೈತರೆಲ್ಲರೂ ಆತ್ಮಹತ್ಯೆಯ ಹಾದಿ ತೊಳೆಯುವಂತಹ ನಿರ್ಣಯಗಳನ್ನು ತೆಗೆದುಕೊಳ್ಳುವುದು ಸರಿಯಲ್ಲ.ಸರ್ಕಾರ ತನ್ನ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ.ಕಾಂಗ್ರೆಸ್ ಪಕ್ಷ ಚುನಾವಣೆ ಸಂದರ್ಭದಲ್ಲಿ ರೈತರ ಪರವಾಗಿ ಅನೇಕ ಭರವಸೆಗಳನ್ನು ನೀಡಿತ್ತು. ಅಧಿಕಾರಕ್ಕೆ ಬಂದ ನಂತರ ರೈತರ ಸಂಕಷ್ಟಗಳನ್ನು ನಿರ್ಲಕ್ಷಿಸಿ, ಪರಿಹಾರದ ಹೊಣೆಗಾರಿಕೆಯಿಂದಲೇ ಹಿಂದೆ ಸರಿಯುತ್ತಿರುವುದು ರೈತರಿಗೆ ಮಾಡುತ್ತಿರುವ ದ್ರೋಹವಾಗಿದೆ.

ಈ ರೈತ ವಿರೋಧಿ ಕ್ಯಾಬಿನೆಟ್ ನಿರ್ಧಾರವನ್ನು ತಕ್ಷಣ ಹಿಂಪಡೆಯಬೇಕು.ಬೆಳೆ ಹಾನಿಗೊಳಗಾದ ಎಲ್ಲಾ ರೈತರಿಗೆ, ಅವರು ವಿಮೆ ಪಡೆದಿರಲಿ ಅಥವಾ ಪಡೆಯದಿರಲಿ, ರಾಜ್ಯ ಸರ್ಕಾರದಿಂದ ಸಮರ್ಪಕ ಪರಿಹಾರ ಘೋಷಿಸಬೇಕು. ಬರ, ಅತಿವೃಷ್ಟಿ ಹಾಗೂ ಪ್ರಕೃತಿ ವಿಕೋಪದಿಂದಿಂದ ಸಂಕಷ್ಟದಲ್ಲಿರುವ ರೈತರಿಗೆ ತುರ್ತು ವಿಶೇಷ ಪ್ಯಾಕೇಜ್ ಪ್ರಕಟಿಸಬೇಕು.ರಾಜ್ಯದ ಅನ್ನದಾತರನ್ನು ಸಂಕಷ್ಟದ ಸಮಯದಲ್ಲಿ ಕೈಬಿಡುವ ಸರ್ಕಾರವನ್ನು ಜನಪ್ರತಿನಿಧಿಗಳು ತೀವ್ರವಾಗಿ ಖಂಡಿಸುತ್ತದೆ. ರೈತರ ಬದುಕು ಉಳಿಸುವ ನಿಟ್ಟಿನಲ್ಲಿ ಸರ್ಕಾರ ತಕ್ಷಣ ತನ್ನ ನಿರ್ಧಾರವನ್ನು ಮರುಪರಿಶೀಲಿಸಿ, ರೈತಪರ ನಿಲುವು ತಾಳಬೇಕೆಂದು ಅವರು ಆಗ್ರಹಿಸಿದ್ದಾರೆ.

# ಕೊಲ್ಹಾರದಲ್ಲಿ ಮಳೆಗಾಗಿ ಕಪ್ಪೆ ಮದುವೆ

• **ಉದಯವಾಹಿನಿ ಕೊಲ್ಹಾರ:**

ಪಟ್ಟಣದ ಮಹಾದೇವಪ್ಪ ತೋಟದ ವಸ್ತಿಯಲ್ಲಿ ರೈತರು ಹಾಗೂ ರೈತ ಮಹಿಳೆಯರು ಕಪ್ಪೆಗಳಿಗೆ ಮದುವೆ ಮಾಡಿಸಿ, ವರುಣರಾಯ ಕೃಪೆ ತೋರಿ ಮಳೆ ಸುರಿಸುವಂತೆ ಪ್ರಾರ್ಥನೆ ಸಲ್ಲಿಸಿದರು.ಮಳೆ ಇಲ್ಲದೆ ತತ್ತರಿಸಿರುವ ರೈತರು ವರುಣರಾಯನ ಪ್ರಾರ್ಥನೆಗೆ ಈ ಪ್ರಯೋಗ ನಡೆಸಿದ್ದಾರೆ. ಮಳೆಇಲ್ಲದೆ ಬೆಳೆಗಳು ಒಣಗುತ್ತಿವೆ. ಮಳೆ ಬರದ ಕಾರಣ ಗ್ರಾಮಸ್ಥರು ಕಪ್ಪೆ ಮದುವೆಯೊಂದಿಗೆ ದೇವರ ಮೊರೆ ಹೋಗಿದ್ದಾರೆ. ಎರಡು ಕಪ್ಪೆಗಳಿಗೆ ಹೂವು ಮುಡಿಸಿ, ಜೊತೆಯಾಗಿ ಇರಿಸಿ ಅರಸಿನದ ಕೊಂಬು ಕಟ್ಟಿಸುವ ಮೂಲಕ ಮದುವೆ ಮಾಡಿಸಿದರು.

ಮುಂಗಾರು ಮಳೆಗಳು ಕೈ ಕೊಟ್ಟಿದ್ದರಿಂದ ಬಿತ್ತಿದ ಬೆಳೆ ಒಣಗುತ್ತಿರುವುದರಿಂದ ದೇವರಲ್ಲಿ ಮೊರೆ ಹೋಗಿ ವರುಣ ದೇವನಿಗೆ ಪೂಜೆ ಸಲ್ಲಿಸಿ ಮಳೆಸುರಿಸಿ ಬೆಳೆ, ಜನ-ಜಾನುವಾರು, ಪ್ರಾಣಿ, ಪಕ್ಷಿ ಸಂಕುಲಗಳನ್ನು ಉಳಿಸುವಂತೆ ಗ್ರಾಮದ ಜನರು ಪ್ರಾರ್ಥಿಸಿದರು. ನಂತರ ಅನ್ನಸಂತರ್ಪಣೆ ನಡೆಸಿದರು.

# ನಿಯಮ ಉಲ್ಲಂಘನೆ ಮಾಡಿರುವ ಬಿಎಲ್‌ಓ ಗಳ ಬಂಧನಕ್ಕೆ : ಶ್ರೀರಾಮುಲು ಆಗ್ರಹ

• **ಉದಯವಾಹಿನಿ ಬಳ್ಳಾರಿ, :**

ಮನೆ ಮನೆಗೆ ಹೋಗದೆ, ಎಲ್ಲಂದರಲ್ಲಿ ಶಾದಿ ಮಹಲ್, ದರ್ಗಾ, ಮದರಸಾ, ಮೊಹಲ್ಲಾಗಳಲ್ಲಿ ಗುಂಪಾಗಿ ಕುಳಿತು,ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ (ಎಸ್ ಐ ಆರ್) ಯ ಎನ್ಯುಮರೇಷನ್ ಪಾರಂ ತುಂಬುತ್ತಿದ್ದಾರೆ. ಇದು ನಿಯಮಗಳ ಉಲ್ಲಂಘನೆಯಾಗಿದೆ. ಅದಕ್ಕಾಗಿ ಇದರಲ್ಲಿ ಪಾಲ್ಗೊಂಡ ಬಿಎಲ್ ಓ ಗಳನ್ನು ತಕ್ಷಣ ಬಂಧಿಸಬೇಕು. ನಗರದ ತಮ್ಮ ನಿವಾಸದಲ್ಲಿ ಇಂದು ಸುದ್ದಿ ಗೋಷ್ಟಿಯಲ್ಲಿ ಮಾತನಾಡುತ್ತಿದ್ದರು. ರಾಜ್ಯದಲ್ಲಿ ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಅಣತಿಯಂತೆ ಕುಕಿಗಳಾಂತಾಗಿದ್ದಾರೆ. ಅವರು ಹೇಳಿದಂತೆ ಮಾಡುತ್ತಿದ್ದಾರೆ. ಅದಕ್ಕಾಗಿ ಎಸ್ ಐ ಆರ್ ನ್ನು ದಿಕ್ಕುತಪ್ಪಿಸುವ ಕೆಲಸ ನಡೆದಿದೆ. ಅದಕ್ಕಾಗಿ ಈವರೆಗಿನ ಎಸ್ ಐ ಆರ್ ಪ್ರಕ್ರಿಯೆ ರದ್ದು ಮಾಡಿ ಚುನಾವಣಾ ಆಯೋಗ ಮಧ್ಯ ಪ್ರವೇಶ ಮಾಡಿ ಕಟ್ಟು ನಿಟ್ಟಿನಲ್ಲಿ ಆಗಬೇಕು ಎಂದರು.



ಉದಯವಾಹಿನಿ ಚಿತ್ರ

ಅಕ್ರಮ ಬಾಂಗ್ಲಾ ವಲಸಿಗರು ಪಶ್ಚಿಮ ಬಂಗಾಳ, ಬಿಹಾರ ಮುಂತಾದ ರಾಜ್ಯಗಳಿಂದ ಹೊರ ಬಿದ್ದವರು ಈಗ ಕರ್ನಾಟಕದಲ್ಲಿ ಆಶ್ರಯಪಡೆದಿದ್ದು. ಅವರಿಗೆ ಕಾಂಗ್ರೆಸ್ ವಾಸತ್ವ ನೀಡುತ್ತಿದೆಂದು ಆರೋಪಿಸಿದರು. ಚುನಾವಣೆಯನ್ನು ಅಕ್ರಮವಾಗಿ ಬೋಗಸ್ ಓಟರ್ ನಿಂದ ಗೆಲ್ಲಲ್ಲು ಈಗಿನಿಂದಲೇ ಪ್ರಯತ್ನ ನಡೆದಿದೆ ಇದನ್ನು ಖಂಡಿಸುವೆ ಎಂದರು.ಈಗಲೂ ನಾನು ಬದ್ದನಾಗಿದ್ದೇನೆ ಕೌಲ್ ಬಜಾರ್ ಪ್ರದೇಶದಲ್ಲಿ ಅಕ್ರಮ ಬಾಂಗ್ಲಾ ವಲಸಿಗರು ಇದ್ದಾರೆ. ಅದನ್ನು ಪತ್ತೆಹಚ್ಚುವ ಕೆಲಸ ಮಾಡಬೇಕು ಎಂದರು. ಬಿ.ಎಸ್. ವಿಜಯೇಂದ್ರ ಅವರು ಪ್ರಾಮಾಣಿಕವಾಗಿ ಪಕ್ಷ ಸಂಘಟನೆ ಮಾಡುತ್ತಿದ್ದಾರೆ. ಹೀಗಿರುವಾಗ ನಾನು ಪಕ್ಷದ ಅಧ್ಯಕ್ಷ ಸ್ಥಾನದ ಆಕಾಂಕ್ಷಿಯಲ್ಲ ಎಂದರು.

# ಗಡಿನಾಡಿನ ಸಾಹಿತ್ಯ-ಸಂಸ್ಕೃತಿ ಶ್ರೀಮಂತ: ಡಾ. ಎಸ್.ಕೆ. ಕೊಪ್ಪ

• **ಉದಯವಾಹಿನಿ ವಿಜಯಪುರ, :**

ಕರ್ನಾಟಕ-ಮಹಾರಾಷ್ಟ್ರ ಗಡಿ ಪ್ರದೇಶವು ತನ್ನದೇ ಆದ ವೈಶಿಷ್ಟ್ಯಪೂರ್ಣ ಸಾಹಿತ್ಯ, ಸಂಸ್ಕೃತಿ ಹಾಗೂ ಭಾಷಾ ಪರಂಪರೆಯನ್ನು ಹೊಂದಿದ್ದು, ಪರಸ್ಪರ ಕೊಡುಕೊಳ್ಳುವಿಕೆಯ ಮೂಲಕ ತನ್ನ ಶ್ರೀಮಂತಿಕೆಯನ್ನು ಉಳಿಸಿಕೊಂಡಿದೆ ಎಂದು ಕನ್ನಡ ನಾಡಿನ ಶಾಸನ ಸಂಶೋಧಕ ಹಾಗೂ ವಿಶ್ರಾಂತ ಪ್ರಾಧ್ಯಾಪಕ ಡಾ. ಎಸ್. ಕೆ. ಕೊಪ್ಪ ಹೇಳಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ ಲಿಂ. ಸಿದ್ದಮ್ಮ ಸಂಗಪ್ಪ ಮೇತ್ರಿ ಹಾಗೂ ಲಿಂ. ಶ್ರೀ ಸಂಗಪ್ಪ ದೇವಪ್ಪ ಮೇತ್ರಿ ಪಡನೂರ ಅವರ ಪುಣ್ಯಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಅತಿಥಿ ಉಪನ್ಯಾಸಕರಾಗಿ ಮಾತನಾಡಿದ ಅವರು, ಗಡಿ ಪ್ರದೇಶದಲ್ಲಿ ಭಾಷೆ, ಸಂಸ್ಕೃತಿ ಮತ್ತು ಆಚರಣೆಗಳ ಪರಸ್ಪರ ವಿನಿಮಯ ಶತಮಾನಗಳಿಂದ ನಡೆದುಕೊಂಡು ಬಂದಿದೆ. ಇಂದಿನ ರಾಜಕೀಯ ಗಡಿಗಳು ಹೊಸದಾಗಿದ್ದು, ಹಿಂದೆ ಕರ್ನಾಟಕ ಮತ್ತು ಮಹಾರಾಷ್ಟ್ರ ಒಂದೇ ಸಾಂಸ್ಕೃತಿಕ ನೆಲೆಯ ಭಾಗವಾಗಿದ್ದವು ಎಂದು ಅಭಿಪ್ರಾಯಪಟ್ಟರು.ತಂದೆ-ತಾಯಿಯ ಸೇವೆ ಅತ್ಯಂತ ಪುಣ್ಯಮಯವಾದ ಕಾರ್ಯವಾಗಿದ್ದು, ಅವರನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ತಮ್ಮ ತಂದೆ-ತಾಯಿಯ ಸ್ಮರಣಾರ್ಥ ದತ್ತಿ ಉಪನ್ಯಾಸವನ್ನು ಆರಂಭಿಸಿರುವ ನಗರದ ಸಿಕ್ಯಾಬ್ ಪದವಿ ಕಾಲೇಜಿನ ಪ್ರಾಧ್ಯಾಪಕ ಡಾ. ಮಲ್ಲಿಕಾರ್ಜುನ ಮೇತ್ರಿ ಅವರ ಕಾರ್ಯ ಶ್ಲಾಘನೀಯವಾಗಿದೆ ಎಂದು ಅವರು ಹೇಳಿದರು. ಇದೇ ವೇಳೆ ಗಡಿನಾಡಿನ ಸಂತ ಪರಂಪರೆ ಹಾಗೂ ಜಾನಪದ ಸಾಹಿತ್ಯದ ಕೊಡುಗೆಯನ್ನು ಸ್ಮರಿಸಿದರು.



ಉದಯವಾಹಿನಿ ಚಿತ್ರ

ಮುಖ್ಯ ಅತಿಥಿಯಾಗಿ ಮಾತನಾಡಿದ ವಿಶ್ರಾಂತ ಕಾರ್ಯ ನಿರ್ವಾಹಕ ಅಭಿಯಂತರ ಎಸ್.ಎಸ್. ತೊದಲಬಾಗಿ, ಆಧುನಿಕ ಸಮಾಜದಲ್ಲಿ ತಂದೆ-ತಾಯಿಯ ಸೇವೆಯ ಮೌಲ್ಯ ಕುಗ್ಗುತ್ತಿರುವುದು ವಿಷಾದನೀಯ. ವೃದ್ಧಾಶ್ರಮಗಳ ಅಗತ್ಯವೇ ಬಾರದಂತಹ ಕುಟುಂಬ ವ್ಯವಸ್ಥೆ ನಿರ್ಮಾಣವಾಗಬೇಕು. ದತ್ತಿ ಸ್ಥಾಪನೆಯ ಮೂಲಕ ಡಾ. ಮಲ್ಲಿಕಾರ್ಜುನ ಮೇತ್ರಿ ಅವರು ತಂದೆ-ತಾಯಿಯ ಋಣ ತೀರಿಸುವ ಆದರ್ಶ ಕಾರ್ಯ ಮಾಡಿದ್ದಾರೆ ಎಂದು ಹೇಳಿದರು.

# ವಿಪತ್ತು ನಿರ್ವಹಣೆಗೆ ಅನುದಾನದ ಕೊರತೆ ಇಲ್ಲ

• **ಉದಯವಾಹಿನಿ ಮಂಗಳೂರು :**

ಪ್ರಕೃತಿ ವಿಕೋಪವನ್ನು ಎದುರಿಸಲು ಸರಕಾರ ಬೇಕಾದಷ್ಟು ಅನುದಾನವನ್ನು ನೀಡಿದೆ. ಅನುದಾನದ ಕೊರತೆ ಇಲ್ಲ.ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳು ದ.ಕ. ಜಿಲ್ಲೆಯ ಪ್ರತಿಯೊಂದು ತಾಲ್ಲೂಕಿಗೂ ತಲಾ 44 ಲಕ್ಷ ರೂ. ಗಳಂತೆ ಒಟ್ಟು 1.5 ಕೋಟಿ ರೂ. ಒದಗಿಸಿದ್ದಾರೆ.

ಇನ್ನು ಅಗತ್ಯ ಇದ್ದರೆ ಸರಕಾರ ಅನುದಾನ ಒದಗಿಸುತ್ತದೆ ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ. ದ.ಕ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ವಿಪತ್ತು ನಿರ್ವಹಣೆ ಮತ್ತು ಕುಡಿಯುವ ನೀರಿನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಾಕೃತಿಕ ವಿಕೋಪದಿಂದ ತೊಂದರೆಗೊಳಗಾದ ಪ್ರದೇಶಗಳಿಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ತಕ್ಷಣ ಧಾವಿಸಿ ಅಗತ್ಯದ ಕ್ರಮಕೈಗೊಳ್ಳಬೇಕು. ಸ್ಥಳಕ್ಕೆ ತೆರಳದೆ ಕೇವಲ ಯಾರಿಂದಲೂ ಫೋಟೊ ತೆಗೆಸಿಕೊಂಡು ಬಳಿಕ ಅನುದಾನ ನೀಡುವ ನಿಟ್ಟಿನಲ್ಲಿ ಪ್ರಕ್ರಿಯೆ ನಡೆಸುವುದು ಸರಿಯಲ್ಲ ಎಂದು ಹೇಳಿದರು. ಪ್ರಾಕೃತಿಕ ವಿಕೋಪ ನಮ್ಮ ಕೈಯಲ್ಲಿಲ್ಲ. ಆದರೆ ಇದರಿಂದಾಗಿ ತೊಂದರೆಗೊಳಗಾದವರಿಗೆ ಜನಪ್ರತಿನಿಧಿಗಳು, ಅಧಿಕಾರಿಗಳು, ಸಾರ್ವಜನಿಕರು ಸಂತ್ರಸ್ತರ ಕಷ್ಟಗಳಿಗೆ ಸ್ಪಂದಿಸಲು ಶ್ರಮಿಸಬೇಕು ಎಂದು ಕರ್ನಾಟಕ ಸರಕಾರದ ಆರೋಗ್ಯ ಸಚಿವ ಯು.ಟಿ. ಖಾದರ್ ಹೇಳಿದರು. ರಾಜ್ಯಮಟ್ಟದಲ್ಲಿ ಮಾಡಿದ ನಿಯಮಗಳು ಕೆಲವೊಂದು ಜಿಲ್ಲೆಗೆ ಹೊಂದಿಕೆಯಾಗುವುದಿಲ್ಲ. ಹೀಗಾಗಿ ನಿಯಮ ವ್ಯಾಪ್ತಿಯಲ್ಲಿ ಸಮಸ್ಯೆಗೆ ಪರಿಹಾರ ಕಂಡುಹಿಡಿಯಲು ಶ್ರಮಿಸಬೇಕಾಗಿದೆ ಎಂದರು.



ಉದಯವಾಹಿನಿ ಚಿತ್ರ

ಅಧಿಕಾರಿಗಳು ಯಾವುದೇ ಸಮಸ್ಯೆಯನ್ನು ಫುಟ್ಬಾಲ್‌ನಲ್ಲಿ ಚೆಂಡನ್ನು ಪಾಸ್ ಮಾಡಿ ದಾಗೆ ಮಾಡಬಾರದು. ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕು. ನಿಂತು ಗೋಲು ಹೊಡೆಯಬೇಕು ಎಂದು ಸಲಹೆ ನೀಡಿದರು.

> ಜೂನ್‌ನಲ್ಲಿ ಮಳೆಯಾಗದ ಕಾರಣ ಭತ್ತದ ನಾಟಿಗೆ ಸಮಸ್ಯೆಯಾಗಿದೆ. ತಗ್ಗುಪ್ರದೇಶದಲ್ಲಿ ಕೃಷಿಗೆ ಅನುಕೂಲ ವಾಗಿದ್ದರೂ, ಎತ್ತರ ಪ್ರದೇಶದಲ್ಲಿ ಕೃಷಿಗೆ ನೀರಾವರಿಯ ಅಗತ್ಯತೆ ಇದೆ. ಬೀಜ ಬೇಕಾದಷ್ಟು ಇದೆ. ಗೊಬ್ಬರದ ಕೊರತೆ ಇಲ್ಲ ಎಂದು ಕೃಷಿ ಅಧಿಕಾರಿ ಹೇಳಿದರು.

# ಧಾರಾಕಾರ ಮಳೆಗೆ ಜನಜೀವನ ಅಸ್ತವ್ಯಸ್ತ;ಶಾಲೆಗಳಿಗೆ ರಜೆ ಘೋಷಣೆ

## ಪ್ರಕೃತಿಯ ಈ ಸೌಂದರ್ಯದ ಜೊತೆಗೆ ಗಾಳಿ-ಮಳೆಯ ಆರ್ಭಟ ಜನರಲ್ಲಿ ಆತಂಕವನ್ನೂ ಉಂಟುಮಾಡಿದೆ

• **ಉದಯವಾಹಿನಿ ಶಿವಮೊಗ್ಗ:**


ಮಲೆನಾಡು ಭಾಗದಲ್ಲಿ ಭಾನುವಾರ ಮಧ್ಯಾಹ್ನದಿಂದ ಆರಂಭವಾದ ಭಾರೀ ಗಾಳಿ-ಮಳೆ ಜನಜೀವನವನ್ನು ಸಂಪೂರ್ಣ ಅಸ್ತವ್ಯಸ್ತಗೊಳಿಸಿದೆ.

ಮೂಡಿಗೆರೆ ತಾಲ್ಲೂಕಿನಾದ್ಯಂತ ರಣಗಾಳಿಯೊಂದಿಗೆ ಸುರಿಯುತ್ತಿರುವ ಧಾರಾಕಾರ ಮಳೆಯಿಂದ ಹಲವು ಕಡೆಗಳಲ್ಲಿ ಮರಗಳು ನೆಲಕ್ಕುರುಳಿದ್ದು, ರಸ್ತೆ ಸಂಪರ್ಕ ಕಡಿತಗೊಂಡಿರುವುದರ ಜೊತೆಗೆ ವಿದ್ಯುತ್ ವ್ಯತ್ಯಯವೂ ಉಂಟಾಗಿದೆ. ಮುಂಜಾಗ್ರತಾ

**1 : ಮಕ್ಕಳ ಸುಕ್ಷರತೆಯ ದೃಷ್ಟಿಯಿಂದ ರಜೆ**
**2 : ತೀರ್ಥಹಳ್ಳಿ ಎಸ್‌ಡಿಎಂಸಿಗೆ ನಿರ್ಧಾರ**
**3 : ಮಂಜಿನ ನಡುವೆ ಹರಿಯುವ ಹಳ್ಳಗಳು**

ಕ್ರಮವಾಗಿ ಮೂಡಿಗೆರೆ ತಾಲ್ಲೂಕಿನ ಎಲ್ಲಾ ಅಂಗನವಾಡಿ ಕೇಂದ್ರಗಳು ಹಾಗೂ ಪ್ರಾಥಮಿಕ ಶಾಲೆಗಳಿಗೆ ಇಂದು ಒಂದು ದಿನ ರಜೆ ಘೋಷಿಸಲಾಗಿದೆ. ಈ ಕುರಿತು ಮೂಡಿಗೆರೆ ತಹಶೀಲ್ದಾರ್ ಅಶ್ವಿನಿ ಆದೇಶ ಹೊರಡಿಸಿದ್ದಾರೆ.

ಕಳೆದ ಎರಡು-ಮೂರು ದಿನಗಳಿಂದ ಸಾಧಾರಣವಾಗಿದ್ದ ಮಳೆ ಕಳೆದ ರಾತ್ರಿ ಹಾಗೂ ಇಂದು ಬೆಳಗ್ಗಿನಿಂದ ಮತ್ತಷ್ಟು ತೀವ್ರಗೊಂಡಿದೆ. ಮತ್ತಿಕಟ್ಟೆ ಗ್ರಾಮದಲ್ಲಿ ರಸ್ತೆ ಮೇಲೆ ಬೃಹತ್ ಮರ ಬಿದ್ದಿದ್ದು, ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡಿದೆ. ಸ್ಥಳೀಯರು ಹಾಗೂ ಅಧಿಕಾರಿಗಳು ಮರ ತೆರವು ಕಾರ್ಯದಲ್ಲಿ ತೊಡಗಿದ್ದಾರೆ.




ಉದಯವಾಹಿನಿ ಚಿತ್ರ

> ತೀರ್ಥಹಳ್ಳಿ ಎಸ್‌ಡಿಎಂಸಿಗೆ ನಿರ್ಧಾರ ಹೊಸನಗರ ತಾಲ್ಲೂಕಿನದ್ಯಾಂತ ಕಳೆದ ಎರಡು ದಿನಗಳಿಂದ ಭಾರಿ ಮಳೆ ಹಿನ್ನೆಲೆಯಲ್ಲಿ ಇಂದು ತಾಲ್ಲೂಕಿನ ಎಲ್ಲಾ ಶಾಲಾ ಕಾಲೇಜುಗಳಿಗೆ ರಜೆ ಘೋಷಣೆ ಮಾಡಲಾಗಿದೆ. ಹೊಸನಗರ ತಹಶೀಲ್ದಾರ್ ಭರತ್ ರಾಜ್ ಅವರು ತಾಲ್ಲೂಕಿನ ಎಲ್ಲಾ ಶಾಲಾ ಕಾಲೇಜುಗಳಿಗೆ ರಜೆ ಘೋಷಣೆ ಮಾಡಿದ್ದಾರೆ.
> -ತಹಶೀಲ್ದಾರ್ ಭರತ್ ರಾಜ್

ಭಾರೀ ಗಾಳಿ ಮಳೆಯಿಂದಾಗಿ ಮರಗಳು ನೆಲಕ್ಕುರುಳಿವೆ ಇದೇ ವೇಳೆ ಬಡವನದಿಣ್ಣೆ ಗ್ರಾಮದ ನಿವಾಸಿ ಪೂರ್ಣೇಶ್ ಅವರ ಮನೆಯ ಮೇಲೆ ಬೃಹತ್ ಮರ ಬಿದ್ದ ಪರಿಣಾಮ ಮನೆಗೆ ತೀವ್ರ ಹಾನಿಯಾಗಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂದು ತಿಳಿದು ಬಂದಿದೆ. ಹಲವೆಡೆ ವಿದ್ಯುತ್ ತಂತಿಗಳ ಮೇಲೂ ಮರಗಳು ಬಿದ್ದಿರುವುದರಿಂದ ಮಲೆನಾಡಿನ ಹತ್ತಾರು

> ಬಿಇಓ ಮಂಜುನಾಥ್ ಆರ್ ಅವರ ಜೊತೆ ಮಾತನಾಡಿ, ತಾಲ್ಲೂಕಿನಲ್ಲಿ ಎಲ್ಲಿ ಹೆಚ್ಚು ಮಳೆ ಆಗುತ್ತಿದೆಯೋ ಅಲ್ಲಿ ಶಾಲೆಯ ಎಸ್‌ಡಿಎಂಸಿ ಅವರು ಮಳೆ ನೋಡಿಕೊಂಡು ವಿದ್ಯಾರ್ಥಿಗಳ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ರಜೆ ನೀಡಬೇಕೆಂದು ಸೂಚಿಸಿದ್ದಾರೆ.
> -ತಹಶೀಲ್ದಾರ್ ರಂಜಿತ್

ಹಳ್ಳಿಗಳು ಕತ್ತಲಲ್ಲಿ ಮುಳುಗಿದ್ದು, ವಿದ್ಯುತ್ ಇಲಾಖೆ ಸಿಬ್ಬಂದಿ ವಿದ್ಯುತ್ ಪೂರೈಕೆ ಪುನಃಸ್ಥಾಪಿಸಲು ಹರಸಾಹಸಪಡುತ್ತಿದ್ದಾರೆ. ಇನ್ನೊಂದೆಡೆ, ಧಾರಾಕಾರ ಮಳೆಯಿಂದ ಮಲೆನಾಡಿನ ಹಳ್ಳ-ಕೊಳ್ಳಗಳು ತುಂಬಿ ಹರಿಯುತ್ತಿವೆ.

ಮೂಡಿಗೆರೆ ತಾಲೂಕಿನ ಕೋಗಿಲೆ ಗ್ರಾಮದ ಹಬ್ಬಿ ಹಳ್ಳ ಮೈದುಂಬಿ ಉಕ್ಕಿ ಹರಿಯುತ್ತಿದ್ದು, ಮಳೆಗಾಲ ಆರಂಭವಾಗಿ ತಿಂಗಳ ಬಳಿಕ ಮಲೆನಾಡಿನ ನೈಜ ಸೊಬಗು ಅನಾವರಣಗೊಂಡಿದೆ. ಹಚ್ಚಹಸಿರಿನ ಪ್ರಕೃತಿ, ಮಂಜಿನ ನಡುವೆ ಹರಿಯುವ ಹಳ್ಳಗಳು ಪ್ರವಾಸಿಗರು ಹಾಗೂ ಸ್ಥಳೀಯರ ಗಮನ ಸೆಳೆಯುತ್ತಿವೆ. ಭಾರೀ ಮಳೆಯಿಂದಾಗಿ ರಸ್ತೆಗೆ ಅಡ್ಡಲಾಗಿ ಬಿದ್ದಿರುವ ಮರ ಆದರೆ, ಪ್ರಕೃತಿಯ ಈ ಸೌಂದರ್ಯದ ಜೊತೆಗೆ ಗಾಳಿ-ಮಳೆಯ ಆರ್ಭಟ ಜನರಲ್ಲಿ ಆತಂಕವನ್ನೂ ಉಂಟುಮಾಡಿದೆ. ರಸ್ತೆ ಸಂಪರ್ಕ ಕಡಿತ, ವಿದ್ಯುತ್ ವ್ಯತ್ಯಯ ಹಾಗೂ ಮರ ಬೀಳುವ ಘಟನೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಅನಗತ್ಯವಾಗಿ ಹೊರಗೆ ಸಂಚರಿಸದಂತೆ ಹಾಗೂ ತಗ್ಗು ಪ್ರದೇಶಗಳ ಬಳಿ ಹೋಗದಂತೆ ಜಿಲ್ಲಾಡಳಿತ ಎಚ್ಚರಿಕೆ ನೀಡಿದೆ. ಹವಾಮಾನ ವೈಪರೀತ್ಯ ಮುಂದುವರಿಯುವ ಸಾಧ್ಯತೆ ಇರುವುದರಿಂದ ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ. ತೀರ್ಥಹಳ್ಳಿಯಲ್ಲೂ ಸಹ ಮಳೆ ಹೆಚ್ಚಾಗಿರುವ ಕಾರಣಕ್ಕೆ ತಾಲ್ಲೂಕಿದ್ಯಾಂತ ಶಾಲಾ ಕಾಲೇಜುಗಳಿಗೆ ರಜೆ ನೀಡುವ ಜವಾಬ್ದಾರಿಯನ್ನು ಆಯಾ ಶಾಲಾ ಕಾಲೇಜಿನ ಎಸ್‌ಡಿಎಂಸಿ ಅವರಿಗೆ ಬಿಡಲಾಗಿದೆ.

### ಸುಕ್ಷರತೆಯ ದೃಷ್ಟಿಯಿಂದ ರಜೆ

> ಈ ಕುರಿತು ಹೊಸನಗರ ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ಮಾತನಾಡಿ ಮಕ್ಕಳ ಸುಕ್ಷರತೆಯ ದೃಷ್ಟಿಯಿಂದ ರಜೆ ಘೋಷಣೆ ಮಾಡಿದ್ದಾರೆ. ಇಂದಿನ ರಜೆಯನ್ನು ಮುಂದೆ ಹೆಚ್ಚುವರಿ ತರಗತಿ ನಡೆಸಿ, ಸರಿದೂಗಿಸುವಂತೆ ಬಿಇಓಗೆ ಸೂಚನೆ ನೀಡಿದ್ದಾರೆ.